ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೨

ಪಟ್ಟಿ – ೦೨

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಐದನೇ ಅಧಿವೇಶನ

ಬುಧವಾರ, ದಿನಾಂಕ : ೦೫ನೇ ಮಾರ್ಚ್, ೨೦೨೫

---

## ಸಮೂಹ – III

೧. ಸಾರಿಗೆ ಮತ್ತು ಮುಜರಾಯಿ ಸಚಿವರು

೨. ಲೋಕೋಪಯೋಗಿ ಸಚಿವರು

೩. ಕಂದಾಯ ಸಚಿವರು

೪. ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

೫. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೬. ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

---

## ರಾಜ್ಯದಲ್ಲಿ ಇ–ಆಸ್ತಿ ನೋಂದಣಿ ಪ್ರಕ್ರಿಯೆ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭ (೧೯೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇ–ಆಸ್ತಿ ನೋಂದಣಿ ಮಾಡಿಸಿಕೊಳ್ಳಲು ಇರುವ ನಿಯಮ/ಮಾನದಂಡಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಈ ಪ್ರಕ್ರಿಯೆಯಲ್ಲಿ ಹಲವಾರು ಗೊಂದಲಗಳು ಸೃಷ್ಟಿಯಾಗಿರುವುದು ಸರ್ಕಾರದ ಗಮನದಲ್ಲಿದೆಯೇ; ಬಂದಿದ್ದಲ್ಲಿ, ಸದರಿ ಗೊಂದಲಗಳನ್ನು ಪರಿಹರಿಸಿ ಸುಲಭಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಇ–ಆಸ್ತಿ ನೋಂದಣಿ ಮಾಡಿಸಿಕೊಳ್ಳುವಲ್ಲಿ ಗ್ರಾಮೀಣ ಭಾಗಕ್ಕೂ ನಗರ ಭಾಗಗಳಿಗೂ ವ್ಯತ್ಯಾಸಗಳಿವೆಯೇ; ಇದ್ದಲ್ಲಿ, ಇರುವಂತಹ ವ್ಯತ್ಯಾಸಗಳಾವುವು ? (ವಿವರವಾಗಿ ಮಾಹಿತಿ ಒದಗಿಸುವುದು)

## ಲೋಕೋಪಯೋಗಿ ಇಲಾಖೆಯಡಿ ದಾವಣಗೆರೆ ಜಿಲ್ಲೆಯಲ್ಲಿ ಕೈಗೊಂಡ ಕಾಮಗಾರಿಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮ (೧೯೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ದಾವಣಗೆರೆ ಜಿಲ್ಲೆಗೆ ಲೋಕೋಪಯೋಗಿ ಇಲಾಖೆಯಡಿ ಬಿಡುಗಡೆಯಾದ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಿಡುಗಡೆ ಮಾಡಲಾದ ಅನುದಾನದಲ್ಲಿ ಬಳಕೆ ಮಾಡಿಕೊಂಡ ಅನುದಾನವೆಷ್ಟು ; ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು

ಅನುದಾನ ಬಳಕೆ ಮಾಡಿಕೊಳ್ಳಲಾಗಿದೆ ; (ಯೋಜನಾವಾರು ಮಾಹಿತಿ ನೀಡುವುದು)

(ಇ) ಸದರಿ ಅನುದಾನದಡಿ ಕೈಗೆತ್ತಿಕೊಂಡ ಕಾಮಗಾರಿಗಳಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ; ಬಾಕಿ ಇರುವ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಯೋಜನಾವಾರು ಮಾಹಿತಿ ಒದಗಿಸುವುದು)

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೯ (೧೯೪) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಈ ಪೈಕಿ ಸ್ವಂತ ಕಟ್ಟಡ ಹೊಂದಿರುವ ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇಲ್ಲದಿದ್ದಲ್ಲಿ, ಕಾರಣಗಳೇನು ? (ವಿವರ ನೀಡುವುದು)

## ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಸಂಪನ್ಮೂಲ ಸಂಗ್ರಹಣೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೦ (೧೨೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಹಣಕಾಸು ವರ್ಷದಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಎಷ್ಟು ಸಂಪನ್ಮೂಲ ಸಂಗ್ರಹಿಸುವ ಗುರಿ ಹೊಂದಲಾಗಿತ್ತು ;

(ಆ) ಈವರೆಗೆ ಆಗಿರುವ ಪ್ರಗತಿಯ ಮಾಹಿತಿ ಹಾಗೂ ವಿವರ ನೀಡುವುದು ;

(ಇ) ಕಾವೇರಿ ತಂತ್ರಾಂಶದ ತಾಂತ್ರಿಕ ತೊಂದರೆಯಿಂದಾಗಿ ಬೊಕ್ಕಸಕ್ಕೆ ಆದ ನಷ್ಟವೆಷ್ಟು ; (ಮಾಹಿತಿ ನೀಡುವುದು)

(ಈ) ಯಾವುದೇ ಸಿದ್ಧತೆ ಇಲ್ಲದೇ ನೋಂದಣಿಗೆ ಹಠಾತ್ ಆಗಿ ಇ-ಖಾತಾ ಕಡ್ಡಾಯ ಮಾಡಿದ ಪರಿಣಾಮ ಸಂಪನ್ಮೂಲ ಸಂಗ್ರಹದಲ್ಲಿ ಎಷ್ಟು ನಷ್ಟವಾಗಿರುತ್ತದೆ ? (ವಿವರ ನೀಡುವುದು)

## ರಾಜ್ಯದಲ್ಲಿನ ಅಕ್ರಮ ಬಡಾವಣೆಗಳ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೧ (೧೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಅಕ್ರಮ ಬಡಾವಣೆಗಳು ಇವೆ ; (ಅಂಕಿ ಅಂಶ ಸಮೇತ ಮಾಹಿತಿ ನೀಡುವುದು)

(ಆ) ಈ ಅಕ್ರಮ ಬಡಾವಣೆ ತಡೆಯಲು ಕಂದಾಯ ಇಲಾಖೆ ಕೈಗೊಂಡ ಕಾನೂನು ಕ್ರಮಗಳೇನು ;

(ಇ) ಅಕ್ರಮ ಸೈಟ್ ನಿರ್ಮಾಣದ ಮಾಹಿತಿ ನೀಡದ ಮತ್ತು ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಇದುವರೆವಿಗೂ ಕೈಗೊಂಡಿರುವ ಕ್ರಮಗಳೇನು ?

## ಮುಜರಾಯಿ ಇಲಾಖೆಯಿಂದ ವಿವಿಧ ಯಾತ್ರೆಗಳ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೨ (೧೨೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೈಲಾಸ ಮಾನಸ ಸರೋವರ ಯಾತ್ರೆಗೆ ೨೦೨೩-೨೪ರ ಸಾಲಿನಲ್ಲಿ ಎಷ್ಟು ಅನುದಾನ ನಿಗದಿಪಡಿಸಲಾಗಿತ್ತು ಹಾಗೂ ಬಳಕೆ ಮಾಡಿರುವ ಅನುದಾನವೆಷ್ಟು ; (ವಿವರ ಒದಗಿಸುವುದು)

(ಆ) ಚಾರ್‌ಧಾಮ್ ಯಾತ್ರೆಗೆ ೨೦೨೩-೨೪ ರಲ್ಲಿ ಎಷ್ಟು ಅನುದಾನ ನೀಡಲಾಗಿದೆ ;

(ಇ) ಆರಾಧನ ಯೋಜನೆಗೆ ೨೦೨೩-೨೪ ರವರೆಗೂ ನಿಗದಿಪಡಿಸಲಾಗಿರುವ ಮೊತ್ತವೆಷ್ಟು ಹಾಗೂ ಬಳಕೆ ಮಾಡಿರುವ ಮೊತ್ತವೆಷ್ಟು ? (ಮಾಹಿತಿ ಒದಗಿಸುವುದು)

## ತುಮಕೂರು ಜಿಲ್ಲೆಯ ಜಮೀನುಗಳ ಇ-ಕೆವೈಸಿ ಮಾಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೯೩ (೧೪೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯಲ್ಲಿ ಇ-ಕೆವೈಸಿ ಮಾಡಲಾದ ಜಮೀನುಗಳ ಸಂಖ್ಯೆ ಎಷ್ಟು ; ಬಾಕಿಯಿರುವ ಜಮೀನುಗಳ ಸಂಖ್ಯೆ ಎಷ್ಟು; ಬಾಕಿಯಿರುವ ಜಮೀನುಗಳ ಇ-ಕೆವೈಸಿ ಯನ್ನು ಮಾಡಲು ಕೈಗೊಂಡಿರುವ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇ-ಕೆವೈಸಿ ಮಾಡಲು ಜಮೀನು ಮಾಲೀಕರಿಂದ ಪಡೆಯಲಾಗುವ ದಾಖಲೆಗಳು ಯಾವುವು ;

(ಇ) ಎಲ್ಲಾ ಜಮೀನುಗಳನ್ನು ಇ-ಕೆವೈಸಿ ವ್ಯಾಪ್ತಿಗೆ ತರಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸಾರ್ವಜನಿಕರು ಸ್ವತಃ ತಮ್ಮ ಜಮೀನು ಇ-ಕೆವೈಸಿ ಮಾಡಲು ಅವಕಾಶ ಕಲ್ಪಿಸಲಾಗಿದೆಯೇ ; ಕಲ್ಪಿಸಲಾಗದಿದ್ದರೆ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಇ-ಕೆವೈಸಿಯನ್ನು ಮಾಡುವ ನೌಕರ/ಅಧಿಕಾರಿಗಳಿಗೆ ಪ್ರತಿ ಜಮೀನಿಗೆ ನೀಡಬೇಕಾದ ಭತ್ಯೆ ಎಷ್ಟು ; ಇಲ್ಲಿಯವರೆಗೆ ಎಷ್ಟು ಭತ್ಯೆ ಬಿಡುಗಡೆ ಮಾಡಲಾಗಿದೆ; ಬಾಕಿಯಿರುವ ಭತ್ಯೆ ಎಷ್ಟು; ಬಾಕಿಯಿರುವ ಭತ್ಯೆಯನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು ?

## ಬೆಂಗಳೂರು ಜಿಲ್ಲೆಯ ಗ್ರಾಮ ಪಂಚಾಯಿತಿಗಳ ಬಿ-ಖಾತಾ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೪ (೧೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಅನಧಿಕೃತ ಕಟ್ಟಡಗಳಿಗೆ ಕಡಿವಾಣ ಹಾಕಲು ಸರ್ಕಾರವು ಬಿ-ಖಾತಾ ನೀಡುತ್ತಿದ್ದು, ಅದೇ ರೀತಿ ಗ್ರಾಮ ಪಂಚಾಯಿತಿಗಳಿಗೆ ಬಿ-ಖಾತಾ ನೀಡಲಾಗುವುದೇ ; (ವಿವರ ನೀಡುವುದು)

(ಆ) ಗ್ರಾಮ ಪಂಚಾಯಿತಿಗಳಿಗೆ ಬಿ-ಖಾತಾ ವಿತರಣೆ ಮಾಡಿದ ನಂತರ ಕಟ್ಟಡ ಮಾರಲು ಸರ್ಕಾರವು ಅವಕಾಶ ನೀಡುವುದೇ ;

(ಇ) ಗ್ರಾಮ ಪಂಚಾಯಿತಿಗಳಿಗೆ ಬಿ-ಖಾತಾ ನೀಡಲು ಇರುವ ಮಾನದಂಡಗಳೇನು ಮತ್ತು ಯಾವ ಕಾಲಮಿತಿಯೊಳಗೆ ಬಿ-ಖಾತಾ ನೀಡಲಾಗುವುದು ? (ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿ ಹಾಳಾಗಿರುವ ರಸ್ತೆ ಕಾಮಗಾರಿಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೫ (೧೭೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಕಳೆದ ೨ ವರ್ಷಗಳಲ್ಲಿ ಬಿದ್ದ ಬಾರಿ ಮಳೆಯಿಂದಾಗಿ ರಸ್ತೆಗಳು ಹಾಳಾಗಿದ್ದು, ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಸದರಿ ರಸ್ತೆಗಳ ದುರಸ್ತಿ ಕೈಗೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ; ಈ ರಸ್ತೆಗಳ ಕಾಮಗಾರಿ ಕೈಗೊಳ್ಳಲು ಮಂಜೂರು ಮಾಡಿದ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಬೆಂಗಳೂರು ಜಿಲ್ಲೆಗಳಲ್ಲಿರುವ ರಸ್ತೆ ಕಾಮಗಾರಿಗಳಿಗೆ ಸರ್ಕಾರದಿಂದ ಮಂಜೂರಾದ ಅನುದಾನವೆಷ್ಟು ; ಈ ಅನುದಾನದಲ್ಲಿ ಪ್ರಗತಿಯಲ್ಲಿರುವ ಮತ್ತು ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ? (ವಿವರ ನೀಡುವುದು)

## ವಸತಿ ನಿರ್ಮಾಣ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೬ (೧೭೪) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೦೨೪ನೇ ಸಾಲಿನಲ್ಲಿ ರಾಜ್ಯ ಸರ್ಕಾರ ಬಡ ಜನರಿಗೆ ವಸತಿ ಯೋಜನೆಯಡಿಯಲ್ಲಿ ಎಷ್ಟು ವಸತಿಗಳನ್ನು ನಿರ್ಮಾಣ ಮಾಡಲು ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ;

(ಆ) ಆ ಪೈಕಿ ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ನಿವರ್ಾಣಕ್ಕೆ ಬಾಕಿ ಇರುವ ವಸತಿಗಳನ್ನು ಯಾವ ಕಾಲಮಿತಿಯೊಳಗೆ ಉದ್ದೇಶಿಸಲಾಗಿದೆ ? (ಕೈಗೊಂಡಿರುವ ಕ್ರಮದ ವಿವರ ನೀಡುವುದು)

## ೮ ಗ್ರಾಮಗಳ ಭೂ ದಾಖಲೆಯ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೭ (೧೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾಷಾವಾರು ಪ್ರಾಂತ್ಯಗಳ ವಿಂಗಡಣೆಯಾಗಿ ಸುಮಾರು ೬೮ ವರ್ಷಗಳು ಕಳೆದರೂ ಭೂ ದಾಖಲೆಗಳಿಗಾಗಿ ಇಂದಿಗೂ ತಮಿಳುನಾಡಿನ ಕಂದಾಯ ಕಛೇರಿಗಳಿಗೆ ಅಲೆದಾಡುವ ಪರಿಸ್ಥಿತಿ ಆನೇಕಲ್ ತಾಲ್ಲೂಕಿನ ಮರಸೂರು ಗ್ರಾಮ ಪಂಚಾಯಿತಿಯ ೮ ಗ್ರಾಮಗಳಿಗೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಆ) ಸದರಿ ಗ್ರಾಮಗಳ ರೈತರು ಕಂದಾಯ ದಾಖಲೆಗಳಿಗಾಗಿ ಚೆನ್ನೈಗೆ ಹೋಗಬೇಕಾಗಿರುವುದು ಮತ್ತು ಜಮೀನು ಮಾರಾಟ ಹಕ್ಕು ಪತ್ರ ಸೇರಿ ಮತ್ತಿತರ ಸಂದರ್ಭಗಳಲ್ಲಿ ದಾಖಲೆಗಳು ಕರ್ನಾಟಕ ಸರ್ಕಾರದಿಂದ ಮಾನ್ಯಗೊಳ್ಳುತ್ತಿಲ್ಲವಾದ ಕಾರಣ ಗ್ರಾಮಸ್ಥರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರವು ಇದನ್ನು ಗಂಭೀರವಾಗಿ ಪರಿಗಣಿಸಿ ಯಾವ ಕಾಲಮಿತಿಯೊಳಗೆ ತೊಂದರೆಯನ್ನು ಸರಿಪಡಿಸಿ ಗ್ರಾಮಸ್ಥರಿಗೆ

ನೆಮ್ಮದಿಯಿಂದ ಜೀವನ ಸಾಗಿಸಲು ಅನುಕೂಲ ಮಾಡಿಕೊಡಲು ತೆಗೆದುಕೊಳ್ಳುವ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

## ಸರ್ಕಾರಿ ನೌಕರರ ವಸತಿ ಗೃಹಗಳು ಪಾಳು ಬಿದ್ದಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೮ (೧೩೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ನೌಕರರ ವಾಸ್ತವ್ಯಕ್ಕೆ ಅನುಕೂಲವಾಗಲು ಲೋಕೋಪಯೋಗಿ ಇಲಾಖಾವತಿಯ ವ್ಯಾಪ್ತಿಗೆ ಒಳಪಟ್ಟ ವಸತಿ ಗೃಹಗಳ ಸಂಖ್ಯೆಯೆಷ್ಟು ;

(ಆ) ಕಳೆದ ೫ ವರ್ಷದಲ್ಲಿ ಇಲಾಖೆಯವತಿಯಿಂದ ಎಷ್ಟು ವಸತಿ ಗೃಹಗಳನ್ನು ನಿರ್ಮಿಸಲಾಗಿದೆ ಹಾಗೂ ವಾಸಿಸುತ್ತಿರುವ ಸರ್ಕಾರಿ ಅಧಿಕಾರಿಗಳ ಕುಟುಂಬಗಳಿಗೆ ಯಾವ ರೀತಿಯ ಭದ್ರತೆಯನ್ನು ನೀಡಲಾಗಿದೆ ;

(ಇ) ರಾಜ್ಯದಲ್ಲಿರುವ ಬಹುತೇಕ ವಸತಿ ಗೃಹಗಳು ಪಾಳು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ೫ ವರ್ಷದಿಂದ ವಸತಿ ಗೃಹಗಳ ನಿರ್ವಹಣೆಗಾಗಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಈ) ಕೋಲಾರ ನಗರದ ಜಿಲ್ಲಾ ಪಂಚಾಯ್ತಿಯ ಕಛೇರಿಯ ಪಕ್ಕದಲ್ಲಿರುವ ಲೋಕೋಪಯೋಗಿ ಇಲಾಖೆಗೆ ಸೇರಿದ ವಸತಿ ನಿಲಯಗಳು ಪಾಳು ಬಿದ್ದಿರುವುದಕ್ಕೆ ಅನೈತಿಕ ಚಟುವಟಿಗೆಗಳ ತಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದನ್ನು ದುರಸ್ತಿ ಪಡಿಸಿ ನೌಕರರ ವಾಸ್ತವ್ಯಕ್ಕೆ ಅನುಕೂಲಮಾಡಿಕೊಡಲು ಯಾವ ಕ್ರಮಕೈಗೊಳ್ಳಲಾಗಿದೆ ?

## ಇಲಾಖೆಯಲ್ಲಿ ಬಾಕಿ ಇರುವ ಭೂ ವ್ಯಾಜ್ಯ ಪ್ರಕರಣಗಳ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೯ (೧೩೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಂದಾಯ ಇಲಾಖೆಯಡಿಯಲ್ಲಿ ಬರುವ ನ್ಯಾಯಾಲಯಗಳಲ್ಲಿ ಕಳೆದ ೫ ವರ್ಷದಿಂದ ಇಲ್ಲಿಯವರೆಗೂ ಬಾಕಿ ಪ್ರಕರಣ ಹೆಚ್ಚು ಅವಧಿಗೆ ಬಾಕಿ ಪ್ರಕರಣ ಹಾಗೂ ಆದೇಶಕ್ಕೆ ಬಾಕಿಯಿರುವ ಭೂ ವ್ಯಾಜ್ಯ ಪ್ರಕರಣಗಳ ಸಂಖ್ಯೆಯೆಷ್ಟು ಹಾಗೂ ಬಾಕಿ ಉಳಿಯಲು ಇರುವ ಕಾರಣಗಳೇನು ;

(ಆ) ಭೂ ವ್ಯಾಜ್ಯಗಳನ್ನು ಇಂತಿಷ್ಟು ಕಾಲಮಿತಿಯುಡಿಯುಲ್ಲಿ ಪೂರ್ಣಗೊಳಿಸಬೇಕೆಂಬ ನೀತಿ ನಿಯುವು ಹಾಗೂ ಮಾನದಂಡವನ್ನು ಸರ್ಕಾರ ರೂಪಿಸಿದೆಯೇ ;

(ಇ) ಕಾಲಮಿತಿಯೊಳಗೆ ವ್ಯಾಜ್ಯವನ್ನು ಇತ್ಯಾರ್ಥ ಪಡಿಸದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಈ) ಬೆಂಗಳೂರು ನಗರ ಜಿಲ್ಲೆಯಲ್ಲಿ ೧೬ ಸಾವಿರಕ್ಕೂ ಹೆಚ್ಚು ಭೂ ವ್ಯಾಜ್ಯ ಪ್ರಕರಣಗಳು ಬಾಕಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ, ಶೀಘ್ರವಾಗಿ ಇತ್ಯಾರ್ಥ ಪಡಿಸಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ?

## ಸಾಲಕ್ಕಾಗಿ ನಕಲಿ ದಾಖಲೆ ಸೃಷ್ಟಿಸಿ ಸಾರಿಗೆ ಇಲಾಖೆಗೆ ವಂಚಿಸುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೦ (೧೪೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾಲಕ್ಕಾಗಿ ನಕಲಿ ದಾಖಲೆಗಳನ್ನು ಸಲ್ಲಿಸಿ, ಆಸ್ತಿತ್ವದಲ್ಲಿಲ್ಲದ ಬೋರ್‌ವೆಲ್ ರಿಗ್‌ಗಳನ್ನು ಹೊರರಾಜ್ಯಗಳಿಂದ ವರ್ಗಾಯಿಸುವ ಹೆಸರಲ್ಲಿ ರಾಜ್ಯದ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಮರು ನೋಂದಣಿ ದಾಖಲಾತಿ ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇದುವರೆಗೂ ಎಷ್ಟು ಪ್ರಕರಣಗಳು ನಡೆದಿದೆ ಹಾಗೂ ಯಾವ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ;

(ಇ) ಮರು ನೋಂದಣಿಗೆ ಅರ್ಜಿ ಸಲ್ಲಿಸುವ ಭೌತಿಕವಾಗಿ ವಾಹನ ಹಾಜರಿರಬೇಕೆಂಬ ನಿಯಮ ಇದೆಯೇ ಹಾಗೂ ಯಾವ ಯಾವ ನೀತಿ ನಿಯಮಗಳಿವೆ ;

(ಈ) ಬೋರ್‌ವೆಲ್ ರಿಗ್‌ಗಳಿಗೆ ಬ್ಯಾಂಕ್‌ಗಳಲ್ಲಿ ೧ ಕೋಟಿ ರೂ. ವರೆಗೆ ಸಾಲ ಸಿಗುತ್ತಿದ್ದು ಇದನ್ನೇ ಬಂಡವಾಳ ಮಾಡಿಕೊಂಡು ಅರುಣಾಚಲ ಪ್ರದೇಶ, ಮಣಿಪುರ, ನಾಗಾಲ್ಯಾಂಡ್ ಸೇರಿ ಇನ್ನಿತರ ರಾಜ್ಯಗಳಿಂದ ಮರು ನೋಂದಣಿ ಮತ್ತು ವಿಳಾಸ ಬದಲಾವಣೆ ಹೆಸರಲ್ಲಿ ರಾಜ್ಯದ ಆರ್.ಟಿ.ಓಗಳಿಗೆ ಕಳುಹಿಸಿ, ದಾಖಲಾತಿಗಳನ್ನು ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;ಲ ಹಾಗಿದ್ದಲ್ಲಿ, ಈ ಪ್ರಕರಣದಡಿಯಲ್ಲಿ ಇದುವರೆಗೂ ಎಷ್ಟು ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳಲಾಗಿದೆ ?

## ಸ್ವಾತಂತ್ರ್ಯ ನಂತರ ಮಂಗಳೂರು ಮೂಡಬಿದ್ರೆ–ಕಾರ್ಕಳಕ್ಕೆ ಸರ್ಕಾರಿ ಬಸ್ಸು ಒದಗಿಸದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)**

೧೦೧ (೧೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಕ್ತಿ ಯೋಜನೆಯಲ್ಲಿ ಅತ್ಯಂತ ಕಡಿಮೆ ಪ್ರಮಾಣದಲ್ಲಿ ಮಹಿಳೆಯರು ಪ್ರಯಾಣಿಸಿದ ಜಿಲ್ಲೆ ಯಾವುದು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಇರುವ ಸರ್ಕಾರಿ ಬಸ್ಸುಗಳ ಸಂಖ್ಯೆ ಎಷ್ಟು; ಯಾವ ಯಾವ ಭಾಗಗಳಲ್ಲಿ ಸರ್ಕಾರಿ ಬಸ್ಸುಗಳನ್ನು ಓಡಿಸಲು ಅನುಮತಿ ಪಡೆದಿರುವುದಿಲ್ಲ ; (ವಿವರ ನೀಡುವುದು)

(ಇ) ಇಲ್ಲಿ ಬಸ್ಸುಗಳ ಸಂಖ್ಯೆ ತೀರಾ ಕಡಿಮೆ ಇದ್ದು, ಶಕ್ತಿ ಯೋಜನೆಗೆ ಪ್ರಯೋಜನ ಪಡೆಯಲು ಮಹಿಳೆಯರಿಂದ ದೂರುಗಳು ಬಂದಿದ್ದರೂ ಸಾರಿಗೆ ಇಲಾಖೆ ಯಾವುದೇ ಕ್ರಮಕೈಗೊಳ್ಳದಿರಲು ಕಾರಣಗಳೇನು ; (ವಿವರ ನೀಡುವುದು)

(ಈ) ಸ್ವಾತಂತ್ರ್ಯದ ನಂತರ ಈವರೆವಿಗೂ ಮಂಗಳೂರು–ಮೂಡಬಿದ್ರೆ–ಕಾರ್ಕಳಕ್ಕೆ ಸರ್ಕಾರಿ ಬಸ್ಸುಗಳನ್ನು ಬಿಡಿಸದೆ ಸುಮಾರು ೬೦ ಕಿ.ಮೀ., ದೂರಕ್ಕೆ ದಿನಾ ಸಂಚರಿಸಲು ಮಹಿಳೆಯರಿಗೆ ಶಕ್ತಿ ಯೋಜನೆಯ ಪ್ರಯೋಜನ ಪಡೆಯಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಪ್ರತಿದಿನ ಸಾವಿರಾರು ಮಹಿಳೆಯರು, ಮಕ್ಕಳು, ವೃದ್ಧರು ಮತ್ತು ಹಿರಿಯ ನಾಗರೀಕರು ಸಂಚರಿಸುತ್ತಿರುವ ಈ ಮಾರ್ಗದಲ್ಲಿ ಕೇವಲ ೦೪ ಬಸ್ಸುಗಳು ಮಾತ್ರ ಓಡಿಸಲಾಗುತ್ತಿದ್ದು, ಈ ಭಾಗದ ಜನರ ಬೇಡಿಕೆಯನ್ನು ಇಲಾಖೆ ನಿರ್ಲಕ್ಷಿಸಲು ಕಾರಣವೇನು ; (ವಿವರ ನೀಡುವುದು) ಈ ಬಗ್ಗೆ ಸರ್ಕಾರದ ಮುಂದಿರುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಊ) ಮಂಗಳೂರು ನಗರಪಾಲಿಕೆ ವ್ಯಾಪ್ತಿಯಲ್ಲಿ ಜನಸಂಖ್ಯೆಯು ೧೦ ಲಕ್ಷಕ್ಕೂ ಮೀರಿದ್ದರೂ ಬಸ್ಸುಗಳನ್ನು ಓಡಿಸಲು ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಋ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಇರುವ ಖಾಸಗಿ ಬಸ್ಸುಗಳ ಹಾಗೂ ಸರ್ಕಾರಿ ಬಸ್ಸುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು) ಹಾಗೂ ನಗರಪಾಲಿಕೆ ವ್ಯಾಪ್ತಿಯಲ್ಲಿ ಶಕ್ತಿ ಯೋಜನೆ ಪಡೆಯಲು ವಂಚಿತರಾಗಿರುವ ಮಹಿಳೆಯರಿಗೆ ನ್ಯಾಯ ಒದಗಿಸಲು ಇಲಾಖೆ ಕೈಗೊಂಡ ಕಾರ್ಯಕ್ರಮಗಳೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಂದರುಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)**

೧೦೨ (೧೮) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಾವ ಯಾವ ಬಂದರುಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದಿದೆ ;

(ಆ) ಮಂಗಳೂರು ನಗರದಲ್ಲಿ ಬಂದರು ಪ್ರದೇಶವನ್ನು ಮೀನುಗಾರಿಕೆ ಬಂದರು ಅಭಿವೃದ್ಧಿ ಪ್ರಾಧಿಕಾರದಿಂದ ಅಭಿವೃದ್ಧಿ ಪಡಿಸದೇ ಇರುವುದರಿಂದ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಇಲಾಖೆ ಮುಂದಿರುವ ಯೋಜನೆಗಳಾವುವು ;

(ಇ) ಬಂದರು ಸ್ಥಳದಲ್ಲಿ ವಾಸವಾಗಿರುವ ಸ್ಥಳೀಯ ಕುಟುಂಬಗಳಿಗೆ ಹೆಚ್ಚುವರಿ ನೆಲಬಾಡಿಗೆ ವಿಧಿಸುತ್ತಿದ್ದು ನೂರಾರು ವರ್ಷಗಳಿಂದ ಈ ಪ್ರದೇಶದಲ್ಲಿ ವಾಸವಾಗಿರುವವರಿಗೆ ಸ್ಥಳವನ್ನು ಮಂಜೂರು ಮಾಡಲು ಇಲಾಖೆ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ವಿದೇಶದಲ್ಲಿ ವ್ಯಾಸಂಗ ಪಡೆಯುತ್ತಿರುವ ವಿದ್ಯಾರ್ಥಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೩ (೧೯) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೦೩ ವರ್ಷಗಳಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ವಿದೇಶದಲ್ಲಿ ವ್ಯಾಸಂಗ ಪಡೆಯಲು ಎಷ್ಟು ಮಂದಿಗೆ ವಿದ್ಯಾರ್ಥಿ ವೇತನ ನೀಡಲಾಗಿದೆ ; (ಸಮುದಾಯವಾರು/ಜಿಲ್ಲಾವಾರು ವಿವರ ನೀಡುವುದು)

(ಆ) ವಿದೇಶದಲ್ಲಿ ವಿದ್ಯಾರ್ಥಿ ವೇತನ ಪಡೆಯಲು ಕೇವಲ ೫೦೦ ವಿಶ್ವವಿದ್ಯಾನಿಲಯಗಳನ್ನು ಮಾತ್ರ ಪರಿಗಣಿಸುತ್ತಿರುವುದರಿಂದ ರಾಜ್ಯದ ಅನೇಕ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅನಾನುಕೂಲವಾಗುತ್ತಿದ್ದು, ೫೦೦ ರ್‍ಯಾಂಕಿಂಗ್ ಇರುವ ವಿದ್ಯಾರ್ಥಿಗಳಿಗೆ ದುಬಾರಿ ಫೀಸ್ ಅನ್ನು ವಿಧಿಸುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ಆಗುತ್ತಿರುವ ತೊಂದರೆಗಳನ್ನು ಇಲಾಖೆ ಸರಿಪಡಿಸಲು ಕ್ರಮಕೈಗೊಳ್ಳುವುದೇ ; ಈ ಬಗ್ಗೆ ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ವಿದೇಶದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಈಗ ನೀಡುತ್ತಿರುವ ವಿದ್ಯಾರ್ಥಿ ವೇತನವನ್ನು ಗರಿಷ್ಠ ಮೊತ್ತ ರೂ.೨೦.೦೦ ಲಕ್ಷದಿಂದ ರೂ.೩೦.೦೦ ಲಕ್ಷಕ್ಕೆ ಏರಿಸುವ ಬಗ್ಗೆ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೇಲ್ದರ್ಜೆಗೇರಿಸಿದ ತಾಲ್ಲೂಕು ರಸ್ತೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)**

೧೦೪ (೨೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳ ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಲೋಕೋಪಯೋಗಿ ಇಲಾಖೆಯಿಂದ ದಕ್ಷಿಣ ಕನ್ನಡ ಜಿಲ್ಲೆಗೆ ೨೦೨೨-೨೩, ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ರಸ್ತೆ ಅಭಿವೃದ್ಧಿಗಾಗಿ ವಿನಿಯೋಗಿಸಿದ ಮೊತ್ತ ಎಷ್ಟು ; (ಯಾವ ಯಾವ ರಸ್ತೆಗಳಿಗಾಗಿ ವಿವರ ನೀಡುವುದು)

(ಇ) ಲೋಕೋಪಯೋಗಿ ಇಲಾಖೆಯಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಾವ ಯಾವ ರಸ್ತೆಗಳನ್ನು N.H. ಯಿಂದ N.H.A.I. ಗೆ ಮೇಲ್ದರ್ಜೆಗೇರಿಸಲಾಗಿದೆ ; ಇದಕ್ಕೆ ಖರ್ಚು ಮಾಡಿದ ಅಂದಾಜು ವೆಚ್ಚ ಎಷ್ಟು; (ವಿವರ ನೀಡುವುದು)

(ಈ) ಮಂಗಳೂರು ನಗರದ ನಂತೂರಿನಲ್ಲಿ ರಸ್ತೆಯ ಅಭಿವೃದ್ಧಿಯು ಕುಂಠಿತಗೊಂಡಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಸ್ತೆ ಕಾಮಗಾರಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ೦೩ ವರ್ಷಗಳಿಂದ ಹಂಚಿಕೆ ಮಾಡಲಾದ ಮನೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)**

೧೦೫ (೨೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಗೆ ೨೦೨೨-೨೩, ೨೦೨೩-೨೪ ಮತ್ತು ೨೦೨೪-೨೫ರ ಸಾಲಿನಲ್ಲಿ ಹಂಚಿಕೆ ಮಾಡಲಾದ ಒಟ್ಟು ಮನೆಗಳ ಸಂಖ್ಯೆ ಹಾಗೂ ಸಂಪೂರ್ಣಗೊಂಡ ಮನೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಕೆ.ಡಿ.ಪಿ. ಸಭೆಯಲ್ಲಿ ಕಳೆದ ೦೫ ವರ್ಷಗಳಿಂದ ವಸತಿ ಇಲಾಖೆಯಿಂದ ಮನೆಗಳು ಹಂಚಿಕೆಯಾಗಿಲ್ಲ ಎಂಬ ಮಾಹಿತಿ ನೀಡಿರುವುದು ನಿಜವೇ ; ಈ ಬಗ್ಗೆ ಇಲಾಖೆ ಮುಂದಿರುವ ದಾಖಲೆಗಳಾವುವು ; (ವಿವರ ನೀಡುವುದು)

(ಇ) ವಸತಿ ಇಲಾಖೆಯಿಂದ ನಿರ್ಮಾಣ ಮಾಡುತ್ತಿರುವ ಮನೆಗಳನ್ನು ಯಾವ ಮಾನದಂಡಗಳಲ್ಲಿ ಹಂಚಿಕೆ ಮಾಡಲಾಗುತ್ತಿದೆ ;

(ಈ) ದಕ್ಷಿಣ ಕನ್ನಡ ಜಿಲ್ಲೆಯಿಂದ ಮನೆ ಹಂಚಿಕೆಗೆ ಬಂದಿರುವ ಬೇಡಿಕೆಗಳು ಎಷ್ಟು? (ವಿವರ ನೀಡುವುದು)

## ರಸ್ತೆಗಳ ಅಭಿವೃದ್ಧಿಗೆ ಅನುದಾನ ನೀಡುವ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೬ (೧೧೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆ ಅಡಿಯಲ್ಲಿ ಕಳೆದ ೨, ವರ್ಷಗಳಲ್ಲಿ ರಸ್ತೆಗಳ ಅಭಿವೃದ್ಧಿ ಹಾಗೂ ದುರಸ್ತಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ಕಾಮಗಾರಿಗಳ, ರಸ್ತೆಗಳ ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆ ಅಡಿಯಲ್ಲಿ ರಸ್ತೆಗಳ ಅಭಿವೃದ್ಧಿಗೆ ೨೦೨೫-೨೬ನೇ ಸಾಲಿನಲ್ಲಿ ಎಷ್ಟು ಅನುದಾನ ಮೀಸಲಿಡಲಾಗಿದೆ ಹಾಗೂ ಯಾವ ಯಾವ ರಸ್ತೆಗಳ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗುವುದು ; (ತಾಲ್ಲೂಕುವಾರು ಕಾಮಗಾರಿಗಳ, ರಸ್ತೆಗಳ ವಿವರ ನೀಡುವುದು)

(ಇ) ಪ್ರಸ್ತುತ ವರ್ಷ ಸದರಿ ಜಿಲ್ಲೆಗಳಲ್ಲಿ ಮಳೆಯಿಂದ ಬಹಳಷ್ಟು ರಸ್ತೆಗಳು ಹಾಳಾಗಿದ್ದು, ಇವುಗಳ ದುರಸ್ತಿಗೆ ಸರ್ಕಾರ ಏನು ಕ್ರಮವಹಿಸಿದೆ ; ಯಾವ ಯಾವ ರಸ್ತೆಗಳ ದುರಸ್ತಿಗೆ ಅನುದಾನ ಮೀಸಲಿಡಲಾಗಿದೆ ; ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಕುಕ್ಕೆ ಸುಬ್ರಮಣ್ಯ ದೇವಸ್ಥಾನದ ಅಭಿವೃದ್ಧಿ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೭ (೧೧೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕುಕ್ಕೆ ಸುಬ್ರಮಣ್ಯ ದೇವಸ್ಥಾನವನ್ನು ಅಭಿವೃದ್ಧಿ ಪ್ರಾಧಿಕಾರವಾಗಿ ಮಾಡುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಅಭಿವೃದ್ಧಿ ಪ್ರಾಧಿಕಾರ ಮಾಡಲಾಗುವುದು ;

ಇಲ್ಲವಾದಲ್ಲಿ ಅಭಿವೃದ್ಧಿ ಪ್ರಾಧಿಕಾರ ಮಾಡದೇ ಇರುವುದಕ್ಕೆ ಕಾರಣಗಳೇನು ;

(ಆ) ಕುಕ್ಕೆ ಸುಬ್ರಮಣ್ಯದ ಎಷ್ಟು ಪ್ರದೇಶ ವ್ಯಾಪ್ತಿಯನ್ನು ಪ್ರಾಧಿಕಾರದ ವ್ಯಾಪ್ತಿಗೆ ಒಳಪಡಿಸಲಾಗುವುದು ;

(ಇ) ಅಭಿವೃದ್ಧಿ ಪ್ರಾಧಿಕಾರ ಮಾಡಲು ಇರುವ ಪ್ರಮುಖ ಮಾನದಂಡಗಳೇನು ; ಜನಸಂಖ್ಯೆಯ ಮಿತಿಯಿದೆಯೇ ;

(ಈ) ಕುಕ್ಕೆ ಸುಬ್ರಮಣ್ಯ ದೇವಸ್ಥಾನಕ್ಕೆ ಮಾಸ್ಟರ್ ಪ್ಲಾನ್‌ನಂತೆ ಅಭಿವೃದ್ಧಿ ಕಾರ್ಯಗಳಿಗೆ ಈವರೆಗೆ ಒಟ್ಟು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಯಾವೆಲ್ಲ ಕಾಮಗಾರಿಗಳನ್ನು ಮಾಡಲಾಗಿದೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಅನುದಾನ ಮೀಸಲಿಡಲಾಗಿದೆ ? (ಕೈಗೊಳ್ಳಲಿರುವ ಅಭಿವೃದ್ಧಿ ಕಾಮಗಾರಿಗಳ ವಿವರ ನೀಡುವುದು)

## ಅಕ್ರಮ ಸಕ್ರಮ ಭೂ ಮಂಜೂರಾತಿ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೮ (೧೧೩+೧೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅಕ್ರಮ ಸಕ್ರಮದಡಿ ಭೂ ಮಂಜೂರಾತಿ ಕೋರಿ ನಮೂನೆ ೫೦. ೫೩ ಮತ್ತು ೫೭ರಡಿ ಕೃಷಿಕರು ಅರ್ಜಿ ಸಲ್ಲಿಸಿದ್ದು, ಹಲವು ಕಡೆ ಒಂದೇ ಸರ್ವೆ ನಂಬರ್‌ನಲ್ಲಿ ಕಂದಾಯ ಮತ್ತು ಅರಣ್ಯ ಇಲಾಖೆಯ ಭೂಮಿಯು ಇದ್ದು ಭೂ ಮಂಜೂರಾತಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನದಲ್ಲಿದೆಯೇ ; ಸದರಿ ಜಮೀನುಗಳ ಗಡಿ ಗುರುತಿಸಲು ಸರ್ಕಾರ ಏನು ಕ್ರಮವಹಿಸಿದೆ ;

(ಆ) ಇದರಿಂದ ಜಮೀನಿನ ಪೋಡಿ ಮಾಡಲು ತುಂಬಾ ವಿಳಂಭವಾಗುತ್ತಿರುವುದು ಸರಿಯಷ್ಟೆ ಈ ಸಮಸ್ಯೆಯನ್ನು ಯಾವಾಗ ಪರಿಹರಿಸಲಾಗುವುದು ;

(ಇ) ಸದರಿ ಸಮಸ್ಯೆಯನ್ನು ಪರಿಹರಿಸಲು ಅರಣ್ಯ ಇಲಾಖೆಯೊಂದಿಗೆ ಜಂಟಿ ಸರ್ವೆ ಮಾಡಲಾಗುವುದೇ ; ಯಾವ ಕಾಲಮಿತಿಯಲ್ಲಿ ಜಂಟಿ ಸರ್ವೆ ಮಾಡಲಾಗುವುದು ?

## ವಾಹನಗಳಿಗೆ ಎಚ್.ಎಸ್.ಆರ್.ಪಿ. ನಂಬರ್ ಪ್ಲೇಟ್ ಅಳವಡಿಸಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೦೯ (೨೦೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಏಪ್ರಿಲ್ ೨೦೧೯ಕ್ಕಿಂತ ಮೊದಲು ನೋಂದಣಿಯಾಗಿರುವ ವಾಹನಗಳ (ಹಳೆಯ ಅಥವಾ ಅಸ್ತಿತ್ವದಲ್ಲಿರುವ) ಸಂಖ್ಯೆ ಎಷ್ಟು ; ಹಾಗೂ ಈವರೆವಿಗೂ ಹೈ ಸೆಕ್ಯುರಿಟಿ ರಿಜಿಸ್ಟ್ರೇಷನ್ ಪ್ಲೇಟ್ (ಎಚ್.ಎಸ್.ಆರ್.ಪಿ) ಅಳವಡಿಸಿಕೊಂಡಿರುವ ವಾಹನಗಳ ಸಂಖ್ಯೆ ಮತ್ತು ಇದರ ಶೇಕಡವಾರು ಪ್ರಮಾಣ ಎಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ವಾಹನಗಳಿಗೆ ಎಚ್.ಎಸ್.ಆರ್.ಪಿ. ಅಳವಡಿಸಿಕೊಳ್ಳಲು ನೀಡಿದ್ದ ಗಡುವು ಮುಕ್ತಾಯಗೊಂಡಿದೆಯೇ ; (ವಿವರ ನೀಡುವುದು) ಗಡುವನ್ನು ಮತ್ತೊಮ್ಮೆ ವಿಸ್ತರಿಸಲು ಸರ್ಕಾರ ಉದ್ದೇಶಿಸಿದೆಯೇ ; (ವಿವರ ನೀಡುವುದು)

(ಇ) ವಾಹನಗಳಿಗೆ ಎಚ್.ಎಸ್.ಆರ್.ಪಿ. ಅಳವಡಿಸಿಕೊಳ್ಳಲು ನೀಡಿದ್ದ ಗಡುವನ್ನು ಇದುವರೆವಿಗೂ ಎಷ್ಟು ಬಾರಿ ವಿಸ್ತರಿಸಲಾಗಿದೆ ; (ದಿನಾಂಕದೊಂದಿಗೆ ವಿವರ ನೀಡುವುದು)

(ಈ) ಎಚ್.ಎಸ್.ಆರ್.ಪಿ. ನಂಬರ್ ಪ್ಲೇಟ್ ಅಳವಡಿಸಿಕೊಳ್ಳದ ವಾಹನಗಳನ್ನು ಪ್ರತಿ ಬಾರಿ ಪೊಲೀಸರು ಹಿಡಿದಾಗಲೂ ವಿಧಿಸಲಾಗುವ ದಂಡದ ಮೊತ್ತ ಎಷ್ಟು ;

(ಉ) ಸದರಿ ವಿಷಯದಲ್ಲಿ ನಿರೀಕ್ಷಿತ ಪ್ರಗತಿ ಆಗದಿರುವುದಕ್ಕೆ ಗುರುತಿಸಿರುವ ಕಾರಣಗಳೇನು ?

## ಮಂಡ್ಯದಲ್ಲಿ 'ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅಮೃತ ಭವನ' ನಿರ್ಮಾಣ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೧೦ (೨೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾಧಿಕಾರಿ, ಮಂಡ್ಯರವರಿಂದ 'ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅಮೃತ ಭವನ'ವನ್ನು ಮಂಡ್ಯ ನಗರದಲ್ಲಿ ನಿರ್ಮಿಸಲು ಕೋರಿ ಸರ್ಕಾರಕ್ಕೆ ಯಾವ ವರ್ಷ ಪ್ರಸ್ತಾವನೆ ಸಲ್ಲಿಸಲಾಗಿದೆ ; (ಅಂದಾಜು ಪಟ್ಟಿ ಮತ್ತು ನಕ್ಷೆಯನ್ನು ಒಳಗೊಂಡ ಸವಿವರದ ಪ್ರಸ್ತಾವನೆ ಪ್ರತಿ ನೀಡುವುದು)

(ಆ) ಸದರಿ ಪ್ರಸ್ತಾವನೆಗೆ ಸರ್ಕಾರ ಅನುಮೋದನೆ ನೀಡಿದೆಯೇ ; (ಇದ್ದಲ್ಲಿ, ಆದೇಶದ ಪ್ರತಿ ನೀಡುವುದು)

(ಇ) ಮಂಡ್ಯ ಜಿಲ್ಲೆ ಅಮೃತ ಮಹೋತ್ಸವ ಆಚರಿಸಿಕೊಂಡು ೯ ವರ್ಷಗಳು ಕಳೆದಿದ್ದರೂ ಇದುವರೆವಿಗೂ ಸದರಿ ಪ್ರಸ್ತಾವನೆಗೆ ಅನುಮೋದನೆ ಮತ್ತು ಅನುದಾನ ನೀಡದೇ ವಿಳಂಬವಾಗಿರುವುದಕ್ಕೆ ಇರುವ ಕಾರಣಗಳೇನು ;

(ಈ) ಅಮೃತ ಭವನ ನಿರ್ಮಾಣಕ್ಕೆ ಅನುದಾನ ಒದಗಿಸುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ; ಅಮೃತ ಭವನ ನಿರ್ಮಾಣ ಕಾಮಗಾರಿ ಆರಂಭಗೊಳ್ಳುವುದು ಯಾವಾಗ ; (ಸಂಪೂರ್ಣ ವಿವರ ನೀಡುವುದು)

(ಉ) ಮಂಡ್ಯ ನಗರದಲ್ಲಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅಮೃತ ಭವನವನ್ನು ನಿರ್ಮಿಸಲು ಸ್ಥಳ ಗುರುತಿಸಲಾಗಿದೆಯೇ ಇದ್ದಲ್ಲಿ ಸ್ಥಳ ಮತ್ತು ಸ್ಥಳದ ವಿಸ್ತೀರ್ಣ ಹಾಗೂ ಅಂದಾಜು ವೆಚ್ಚವೆಷ್ಟು? (ಸಂಪೂರ್ಣ ಮಾಹಿತಿ ನೀಡುವುದು)

# ಮಂಡ್ಯ ಜಿಲ್ಲೆ ಮದ್ದೂರು ಪಟ್ಟಣದಲ್ಲಿ ರೇಷ್ಮೆ ಗೂಡು ಮಾರುಕಟ್ಟೆ ಆರಂಭಿಸುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೧೧ (೨೦೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ರೇಷ್ಮೆ ಬೆಳೆ ಬೆಳೆಯಲಾಗುತ್ತದೆ ; ಆ ಪೈಕಿ ಅತಿ ಹೆಚ್ಚು ರೇಷ್ಮೆ ಉತ್ಪಾದಿಸುವ ಜಿಲ್ಲೆಗಳು ಯಾವುವು ; (ಶ್ರೇಣಿವಾರು ಮೊದಲ ೦೫ ಜಿಲ್ಲೆಗಳ ಮಾಹಿತಿ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಉತ್ಪಾದನೆ ಆಗುತ್ತಿರುವ ಗೂಡು ಮತ್ತು ರೇಷ್ಮೆ ಪ್ರಮಾಣ ಎಷ್ಟು ; ಸಂಬಂಧಿಸಿದಂತೆ ತಾಲ್ಲೂಕುವಾರು, ಉತ್ಪಾದನೆಯಾಗುವ ಪ್ರಮಾಣ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ೦೫ ವರ್ಷಗಳಲ್ಲಿ ರಾಜ್ಯದಲ್ಲಿ ರೇಷ್ಮೆ ಬೆಳೆ ವಿಸ್ತೀರ್ಣ ಹೆಚ್ಚಿದೆಯೇ ಅಥವಾ ಕುಗ್ಗಿದೆಯೇ ; ಯಾವ ಜಿಲ್ಲೆಗಳಲ್ಲಿ ಹೆಚ್ಚಿದೆ ಮತ್ತು ಯಾವ ಜಿಲ್ಲೆಗಳಲ್ಲಿ ಕುಗ್ಗಿದೆ ; ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು, ವಿಸ್ತೀರ್ಣದ ಮಾಹಿತಿಯೊಂದಿಗೆ ಸಂಪೂರ್ಣ ವಿವರ ನೀಡುವುದು ;

(ಈ) ಮಂಡ್ಯ ಜಿಲ್ಲೆಯಲ್ಲಿ ರೇಷ್ಮೆ ಬೆಳಗಾರರಿಗೆ ಕಳೆದ ೦೩ ವರ್ಷಗಳಲ್ಲಿ ಸರ್ಕಾರಿ ರೇಷ್ಮೆ ಬಿತ್ತನೆ ಕೋಠಿಗಳ ಮೂಲಕ ವಿತರಿಸಲಾಗಿರುವ ಮೊಟ್ಟೆ ಪ್ರಮಾಣ ಎಷ್ಟು ; ಎಷ್ಟು ರೈತರು ಪಡೆದುಕೊಂಡಿದ್ದಾರೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಉ) ಮಂಡ್ಯ ಜಿಲ್ಲೆ ಮದ್ದೂರು ಪಟ್ಟಣದಲ್ಲಿ ರೇಷ್ಮೆ ಗೂಡು ಮಾರುಕಟ್ಟೆ ಆರಂಭಿಸುವ ಕುರಿತು ಸರ್ಕಾರದ ನಿಲುವೇನು ?

# ರಾಜ್ಯದಲ್ಲಿ PMAY(G) ಅಡಿಯಲ್ಲಿ ನಡೆಯುತ್ತಿರುವ ವಸತಿ ರಹಿತರ ಸಮೀಕ್ಷೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೧೨ (೨೦೩) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ PMAY(G) ಅಡಿಯಲ್ಲಿ ಆಪ್ ಮೂಲಕ ವಸತಿ ರಹಿತರ ಸಮೀಕ್ಷೆ ನಡೆಸಲಾಗುತ್ತಿದೆಯೇ ;

(ಆ) ಇದ್ದಲ್ಲಿ, ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸಮೀಕ್ಷೆಗೆ ನಿಯೋಜಿಸಲಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಸಮೀಕ್ಷಾ ಕಾರ್ಯದ ಅವಧಿ ಎಷ್ಟು;

(ಇ) ೨೦೧೮ರಲ್ಲಿ ರಾಜ್ಯದಾದ್ಯಂತ ಗ್ರಾಮೀಣ ಪ್ರದೇಶದಲ್ಲಿ ನಡೆಸಲಾದ ವಸತಿ/ ನಿವೇಶನ ರಹಿತ ಸಮೀಕ್ಷೆಯಲ್ಲಿ ಗುರುತಿಸಲಾದ ವಸತಿ ರಹಿತರು ಮತ್ತು ನಿವೇಶನ ರಹಿತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ೨೦೧೮ರ ಸಮೀಕ್ಷೆಯಲ್ಲಿ ಗುರುತಿಸಿದವರ ಪೈಕಿ ಎಷ್ಟು ಕುಟುಂಬಗಳಿಗೆ ವಸತಿ ಸೌಲಭ್ಯ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಆದ್ಯತಾ ಪಟ್ಟಿಯಲ್ಲಿ ಮನೆ ನಿರ್ಮಿಸಲು ಆಸಕ್ತಿ ಹೊಂದಿಲ್ಲದಿದ್ದವರ ಮಾಹಿತಿಯುನ್ನು Awaasoft ತಂತ್ರಾಂಶದಲ್ಲಿ ಡಿಲೀಟ್ ಮಾಡಲಾದ 'ಅರ್ಹ'ರನ್ನು ಮತ್ತೊಮ್ಮೆ ಸಮೀಕ್ಷೆಯುಲ್ಲಿ ಪರಿಗಣಿಸಲಾಗುವುದೇ ; ಮಾಹಿತಿ ನೀಡುವುದು ;

(ಊ) ಪ್ರಸ್ತುತ ನಡೆಸುತ್ತಿರುವ ಸಮೀಕ್ಷೆಯಲ್ಲಿ ವಸತಿ ರಹಿತರನ್ನು 'ಅರ್ಹ'ರನ್ನಾಗಿ ಗುರುತಿಸಲು/ಪರಿಗಣಿಸಲು ಇರುವ ಮಾನದಂಡಗಳೇನು ;

(ಖ) ಜೀವನೋಪಾಯಕ್ಕಾಗಿ ಟ್ಯಾಕ್ಸಿ, ಮೂರು ಚಕ್ರದ ವಾಹನ ಹಾಗೂ ಬಿ.ಪಿ.ಎಲ್. ಕಾರ್ಡ್ ಹೊಂದಿದ್ದಲ್ಲಿ ಸದರಿಯವರನ್ನು 'ಅರ್ಹ'ರೆಂದು ಪರಿಗಣಿಸಬಾರದೇಕೆ ; ಈ ಬಗ್ಗೆ ಸರ್ಕಾರದ ನಿಲುವೇನು ?

## ರಾಜ್ಯದಲ್ಲಿ PMAY(G) ಮನೆ ನಿರ್ಮಿಸಿಕೊಳ್ಳದವರ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೧೩ (೨೦೪) ಮಾನ್ಯ ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೧-೨೨ ಮತ್ತು ೨೦೨೪-೨೫ನೇ ಸಾಲುಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ (ಗ್ರಾಮೀಣ) ಅನುಮೋದನೆಯಾದ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು; (ವರ್ಗವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆಯ್ಕೆಯಾದ ಒಟ್ಟು ಫಲಾನುಭವಿಗಳ ಪೈಕಿ ಪ್ರಥಮ ಕಂತಿನ ಮುಂಗಡ ಅನುದಾನ ನೀಡಲಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ವರ್ಗವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಮುಂಗಡ ಅನುದಾನ ನೀಡಲಾದ ಪೈಕಿ ಪ್ರಗತಿಯಲ್ಲಿರುವ ಮತ್ತು ಪೂರ್ಣಗೊಂಡ ಮನೆಗಳ ಸಂಖ್ಯೆ ಎಷ್ಟು; (ವರ್ಗವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪ್ರಥಮ ಕಂತಿನ ಮುಂಗಡ ಅನುದಾನ ಪಡೆದು ಮನೆಗಳನ್ನು ಪ್ರಾರಂಭಿಸದ ಒಟ್ಟು ಫಲಾನುಭವಿಗಳು ಮತ್ತು ಅವರುಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಗವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಪ್ರಥಮ ಕಂತಿನ ಮುಂಗಡ ಅನುದಾನ ಪಡೆದು ಫಲಾನಾಭವಿಗಳು ಮನೆಗಳನ್ನು ನಿರ್ಮಿಸದಿದ್ದಲ್ಲಿ ಕ್ರಮವಹಿಸುವ ಕುರಿತು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಮಾರ್ಗಸೂಚಿಗಳೇನು ?

## ಕರ್ನಾಟಕ ರಾಜ್ಯದಲ್ಲಿ ಸಾರಿಗೆ ವಾಹನಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೪ (೯೫೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸುರಕ್ಷತೆ ಹಾಗೂ ಪ್ರಯಾಣಿಕರ ಹಿತದೃಷ್ಟಿಯಿಂದ ಸರ್ಕಾರಿ ಹಾಗೂ ಖಾಸಗಿ ವಾಹನಗಳು ಪಾಲಿಸಬೇಕಾದ ಸಾರಿಗೆ ನಿಯಮಗಳು ಯಾವುವು ; ಬಸ್ಸುಗಳಲ್ಲಿ ನಿಂತು ಪ್ರಯಾಣಿಸಬಹುದಾದ ಗರಿಷ್ಠ ಪ್ರಯಾಣಿಕರ ಸಂಖ್ಯೆಯನ್ನು ಹೇಗೆ ನಿಗದಿಮಾಡಲಾಗುತ್ತಿದೆ ; ಪರಿಶೀಲಿಸುವ ಕ್ರಮಗಳಾವುವು ; (ವಿವರ ನೀಡುವುದು)

(ಆ) ಸಾರ್ವಜನಿಕ ಪ್ರಯಾಣಿಕ ವಾಹನಗಳಾದ ಬಸ್ಸುಗಳಲ್ಲಿ ಸಾರಿಗೆ ಇಲಾಖೆ ನಿಯಮಗಳಾನುಸಾರ ಇರಬೇಕಾದ ಸೌಕರ್ಯಗಳು ಯಾವುವು ; ಅವುಗಳನ್ನು ಸಾರಿಗೆ ಇಲಾಖೆಯಲ್ಲಿ ವಾಹನ ದಾಖಲಿಸುವಾಗ (ಪಾಸಿಂಗ್) ನಿಯಮಾನುಸಾರ ಇದ್ದು ನಂತರ ಅದನ್ನು ಮಾರ್ಪಡಿಸದೆ ಇರುವ ಬಗ್ಗೆ ಖಾತರಿಪಡಿಸುವ ವ್ಯವಸ್ಥೆಯಿದೆಯೇ ;

(ಇ) ಖಾಸಗಿ ಪ್ರಯಾಣಿಕ ಬಸ್ಸುಗಳಲ್ಲಿ ಡಿಜೆ ಸೌಂಡ್ ಸಿಸ್ಟಂ ಮತ್ತು ಎಲ್ ಇ ಡಿ ಲೈಟುಗಳನ್ನು ಅಳವಡಿಸಲು ಮತ್ತು ಪ್ರವಾಸಿ ಬಸ್ಸುಗಳಲ್ಲಿ ಡ್ಯಾನ್ಸಿಂಗ್ ಫ್ಲೋರ್ಸ್ ವ್ಯವಸ್ಥೆ ಅಳವಡಿಸಲು ನಿಯಮಗಳಲ್ಲಿ ಅವಕಾಶವಿದೆಯೇ ; ಇಲ್ಲದಿದ್ದಲ್ಲಿ ಈ ಬಗ್ಗೆ ಇಲಾಖೆ ಪರಿಶೀಲನೆ ನಡೆಸಿದ ವರದಿಗಳಿವೆಯೇ ; (ವಿವರ ನೀಡುವುದು)

(ಈ) ಖಾಸಗಿ ಪ್ರಯಾಣಿಕ ಬಸ್ಸುಗಳಲ್ಲಿ ಪ್ರಯಾಣಿಕರ ಸೀಟುಗಳ ನಡುವಿನ ಅಂತರ ಸರಕು ಇಡುವ ಕ್ಯಾರಿಯರ್ ಪ್ರಥಮ ಚಿಕಿತ್ಸೆ ಪೆಟ್ಟಿಗೆ, ತುರ್ತು ನಿರ್ಗಮನ ಬಾಗಿಲು, ಬಸ್ಸುಗಳ ಮೆಟ್ಟಿಲುಗಳ ಎತ್ತರ ಇತ್ಯಾದಿಗಳನ್ನು ಪ್ರಯಾಣಿಕರಿಗೆ ಅನುಕೂಲವಾಗಿರುವಂತೆ ಖಾತರಿಪಡಿಸುವ ಬಗ್ಗೆ ಪ್ರಸ್ತುತ ಚಾಲ್ತಿಯಲ್ಲಿರುವ ವ್ಯವಸ್ಥೆ ಯಾವುದು ; ಈ ಕುರಿತ ವರದಿ ಮತ್ತು ವಿವರ ನೀಡುವುದು ?

## ಕರ್ನಾಟಕ ವಿಪತ್ತು ನಿರ್ವಹಣಾ ಪ್ರಾಧಿಕಾರ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೫ (೧೯೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ವಿಪತ್ತು ನಿರ್ವಹಣಾ ಪ್ರಾಧಿಕಾರ ಜಿಲ್ಲಾ ಮಟ್ಟದ ಮುಖ್ಯಸ್ಥರು ಯಾರು ಹಾಗೂ ಇತರ ಸದಸ್ಯರು ಯಾರು ; (ವಿವರ ನೀಡುವುದು)

(ಆ) ಕರ್ನಾಟಕ ರಾಜ್ಯದಲ್ಲಿ ಆಯಾಯ ವಿಪತ್ತು ಸಂದರ್ಭದಲ್ಲಿ ಕರ್ನಾಟಕ ವಿಪತ್ತು ನಿರ್ವಹಣಾ ಪ್ರಾಧಿಕಾರದ ಮೂಲಕ ಗುರುತಿಸಿದ ಅಪಾಯಕಾರಿ ಸ್ಥಳಗಳ ಸಂಖ್ಯೆಯೆಷ್ಟು ; ಅವುಗಳ ನಿರ್ವಹಣೆ ಮತ್ತು ಪರಿಣಾಮಕಾರಿಯಾಗಿ ಸರಿಪಡಿಸುವಿಕೆಗೆ (Mitigation) ಹೇಗೆ ಕ್ರಮವಹಿಸಲಾಗುತ್ತಿದೆ ; ಪ್ರತಿ ವರ್ಷ ಈ ಅಪಾಯಕಾರಿ ಸ್ಥಳಗಳಲ್ಲಿ ಸಮಸ್ಯೆಗಳು ಪುನರಾವರ್ತನೆಯಾಗುತ್ತಿದೆಯೇ ; ಸಮಸ್ಯೆಗಳು ಪುನರಾವರ್ತನೆಯಾಗದಂತೆ ಸಂಬಂಧಪಟ್ಟ ಇಲಾಖೆಗಳಿಗೆ ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆಯೇ ಮತ್ತು ಯಾವ ರೀತಿ ಕ್ರಮವಹಿಸಲಾಗುತ್ತಿದೆ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕೃತಕ ನೆರೆ ಬರುವ ಪ್ರದೇಶ, ಭೂಕುಸಿತ ಸಂಭಾವ್ಯ ಸ್ಥಳಗಳು, ಅಸುರಕ್ಷಿತ ಕಾಲು ಸಂಕ/ ಸೇತುವೆ, ರಸ್ತೆ ಕುಸಿತ, ಅಪಾಯಕಾರಿ ಮತ್ತು ಅಸುರಕ್ಷಿತ ಕಟ್ಟಡ

ಮತ್ತು ಮರ ಇತ್ಯಾದಿಗಳನ್ನು ಗುರುತಿಸಿ ಜಿಪಿಎಸ್ ಸಹಿತ ವರದಿಸಿದ್ದು ಆಯಾಯ ಸಂದರ್ಭಗಳಲ್ಲಿ ಸೂಚನಾ ಫಲಕ ಅಳವಡಿಸಿದ್ದು ನಂತರ ಈ ಸ್ಥಳಗಳ ಬಗ್ಗೆ ಯಾವ ಕ್ರಮ ಜರುಗಿಸಲಾಗಿದೆ ;

(ಈ) ಇಂತಹ ಸ್ಥಳಗಳಲ್ಲಿ ತುರ್ತಾಗಿ ಕೈಗೊಳ್ಳಬೇಕಾದ ನಿರ್ಮಾಣ, ದುರಸ್ತಿ ಕಾಮಗಾರಿಗಳಾದ ಕಾಲು ಸಂಕ/ಸೇತುವೆ ರಚನೆ, ತಡೆಗೋಡೆ ರಚನೆ, ಮರ ತೆರವುಗೊಳಿಸುವಿಕೆ, ಇತ್ಯಾದಿಗಳನ್ನು ಕೈಗೊಳ್ಳುವ ಬಗ್ಗೆ ಸಂಬಂಧಪಟ್ಟ ಇಲಾಖೆಗಳಿಗೆ ಮಾಹಿತಿ ನೀಡಿದೆಯೇ ; ಎಷ್ಟು ಕಾಮಗಾರಿಗಳನ್ನು ಚಾಲ್ತಿ ಸಾಲಿನ ಸಂಬಂಧಪಟ್ಟ ಇಲಾಖೆಗಳ ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗಿದೆ ; ಪ್ರಸ್ತುತ ಅವುಗಳ ಸ್ಥಿತಿಗತಿಗಳೇನು ? (ವಿವರ ನೀಡುವುದು)

## ಬಗರ್ ಹುಕುಂ ಅಕ್ರಮ ಸಕ್ರಮ ಯೋಜನೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೬ (೧೯೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾರ್ವಜನಿಕ ಉದ್ದೇಶಗಳಿಗೆ ಭೂ ಮಂಜೂರಾತಿಗೆ ಕೋರಿದ ಅರ್ಜಿಗಳೆಷ್ಟು ; ಮಂಜೂರಾತಿಯೆಷ್ಟು ; ಬಾಕಿಯೆಷ್ಟು ; ಬಾಕಿ ಉಳಿಯಲು ಕಾರಣವೇನು ;

(ಆ) ರಾಜ್ಯದಲ್ಲಿ ಬಗರ್ ಹುಕುಂ ಅಕ್ರಮ ಸಕ್ರಮ ಭೂಮಿ ಮಂಜೂರಾತಿ ಕುರಿತಂತೆ ಆಯಾಯ ಮಟ್ಟದ ಸಮಿತಿಗಳು ನಿಯಮಿತವಾಗಿ ಸಭೆ ಸೇರಿವೆಯೇ ; ಸಭೆ ಕರೆಯುವ ಜವಾಬ್ದಾರಿ ಯಾರದ್ದು ; ಈ ಸಭೆಗಳು ಜರುಗದೆ ಭೂ ಮಂಜೂರಾತಿ ಕಡತಗಳು ಬಾಕಿಯಾಗಿರುವ ಬಗ್ಗೆ ಸರ್ಕಾರ ಏನು ಕ್ರಮವಹಿಸುತ್ತಿದೆ ;

(ಇ) ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಬಗರ್ ಹುಕುಂ ಭೂ ಮಂಜೂರಾತಿ ನಿಯಮಗಳು ಮತ್ತು ಷರತ್ತುಗಳೇನು ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅಕ್ರಮ ಸಕ್ರಮ ಭೂ ಮಂಜೂರಾತಿ ಅರ್ಜಿಗಳು ಯಾವ ಹಂತದಲ್ಲಿ ಎಷ್ಟು ಸಮಯದಿಂದ ವಿಲೇವಾರಿಗೆ ಬಾಕಿಯಿದೆ ; ಭೂ ಮಂಜೂರಾತಿ ನಿಯಮಗಳನ್ವಯ ಯಾವುದಾದರೂ ಒಂದು ಷರತ್ತಿನಂತೆ ಮಂಜೂರಾತಿಗೆ ಅವಕಾಶವಿಲ್ಲದ ಪ್ರಕರಣಗಳನ್ನು ತಿರಸ್ಕರಿಸದೆ ಕಡತ ಮುಂದುವರಿಸಿ ಒಟ್ಟು ಅರ್ಜಿಗಳ ವಿಲೇವಾರಿಯಲ್ಲಿ ಸಮಸ್ಯೆಯಾಗುತ್ತಿರುವ ಬಗ್ಗೆ ಇಲಾಖೆಯ ಕ್ರಮಗಳೇನು ;

(ಉ) ಈ ಜಿಲ್ಲೆಗಳಲ್ಲಿ ಭೂ ಮಂಜೂರಾತಿ ಅರ್ಜಿ ತಿರಸ್ಕೃತವಾಗುವ ಮಾಹಿತಿಯಿರುವ ಪ್ರಭಾವಿಗಳು ಸದರಿ ಸ್ಥಳದಲ್ಲಿರುವ ಮರಗಳನ್ನು ಕಡಿಯುತ್ತಿರುವ, ಜೆಸಿಬಿಯಿಂದ ಬೇಲಿ ಹಾಕಿರುವ, ಕೊಳವೆ ಬಾವಿ ಕೊರೆದಿರುವ, ಅಕ್ರಮ ಕಟ್ಟಡ ಕಟ್ಟಿ ಸಿ. ಸಿ. ಟಿವಿ, ಇತ್ಯಾದಿ ಅಳವಡಿಸಿರುವ ಪ್ರಕರಣಗಳಲ್ಲಿ ಇಲಾಖೆ ಪರಿಶೀಲಿಸಿ ಸರ್ಕಾರಿ ಸ್ಥಳಗಳನ್ನು ಸರ್ಕಾರದ ಸುಪರ್ಧಿಗೆ ವಹಿಸಿಕೊಳ್ಳಲು ಏನು ಕ್ರಮವಹಿಸಲಾಗುತ್ತಿದೆ ;

(ಊ) ಈಗಾಗಲೇ ಒಂದಕ್ಕಿಂತ ಹೆಚ್ಚು ಸಾಗುವಳಿ ಚೀಟಿ ಮೂಲಕ ಭೂಮಿ ಹೊಂದಿರುವ ವ್ಯಕ್ತಿ ಮತ್ತು ಕುಟುಂಬಕ್ಕೆ ಇನ್ನೊಮ್ಮೆ ಬಗರ್ ಹುಕುಂ ಭೂಮಿ ಮಂಜೂರಾತಿಗೆ ಅವಕಾಶವಿದೆಯೇ ; ಇಲ್ಲದಿದ್ದಲ್ಲಿ ಇಂತಹ ಪ್ರಕರಣಗಳಲ್ಲಿ ಭೂ ಮಂಜೂರಾತಿಯನ್ನು ರದ್ದುಪಡಿಸಿ ಸರ್ಕಾರಿ ಭೂಮಿಯ ಅಕ್ರಮಣವನ್ನು ವಿರಹಿತಗೊಳಿಸಲು ಯಾವ ಕ್ರಮವಹಿಸಿದೆ ?

## ಲೋಕೋಪಯೋಗಿ ಇಲಾಖೆ ವ್ಯಾಪ್ತಿಯ ರಸ್ತೆಗಳ ನಿರ್ವಹಣೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೭ (೧೯೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿರುವ ರಸ್ತೆಗಳ ಸಂಖ್ಯೆ ಮತ್ತು ಉದ್ದ ಎಷ್ಟು ; ನಿಗಧಿತವಾಗಿ ಅಥವಾ ವಾರ್ಷಿಕವಾಗಿ ಈ ರಸ್ತೆಗಳ ನಿರ್ವಹಣೆಗಾಗಿ ಅಗತ್ಯ ವಿರುವ ಅನುದಾನವೆಷ್ಟು ; ಕಳೆದ ಒಂದು ವರ್ಷದಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿರುವ ರಸ್ತೆಗಳ ಭೂ ಗಡಿಯ ಅಂಚನ್ನು ಮತ್ತು ಕಟ್ಟಡ ರೇಖೆಯನ್ನು ಗುರುತಿಸುವ ಸಕ್ಷಮ ಪ್ರಾಧಿಕಾರ ಯಾವುದು ; ಸದರಿ ರಸ್ತೆ ಅಂಚಿನಲ್ಲಿ ಕಟ್ಟಡ ಕಟ್ಟುವವರಿಗೆ ನಿರಾಕ್ಷೇಪಣಾ ಪತ್ರ ನೀಡಲು ಇರುವ ನಿಯಮಗಳೇನು ; ವಿವರ ನೀಡುವುದು ;

(ಇ) ರಸ್ತೆ ಅಂಚಿನಲ್ಲಿ ಕಟ್ಟಡ ಕಟ್ಟುವವರೆ ನಿರಾಕ್ಷೇಪಣಾ ಪತ್ರ ನೀಡುವಾಗ ಲೋಕೋಪಯೋಗಿ ಇಲಾಖೆ ಯಾವ ಯಾವ ಇಲಾಖೆಗಳಿಂದ ಅಭಿಪ್ರಾಯ ಪಡೆದುಕೊಳ್ಳಬೇಕಾಗಿದೆ ; ಈ ಕುರಿತ ನಿಯಮಗಳೇನು ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ಒಂದು ವರ್ಷದಲ್ಲಿ ಲೋಕೋಪಯೋಗಿ ವ್ಯಾಪ್ತಿಯ ರಸ್ತೆ ಅಂಚಿನಲ್ಲಿ ಕಟ್ಟಡ ಕಟ್ಟುವವರು ನಿರಾಕ್ಷೇಪಣಾ ಪತ್ರ ಕೋರಿರುವ ಅರ್ಜಿಗಳೆಷ್ಟು; ಎಷ್ಟು ಅರ್ಜಿಗಳನ್ನು ಯಾವಾಗ ವಿಲೇವಾರಿ ಮಾಡಲಾಗಿದೆ ; ಸದರಿ ಅರ್ಜಿಗಳ ವಿಲೇವಾರಿಗೆ ನಿಗದಿಪಡಿಸಿದ ಕಾಲಾವಧಿ ಎಷ್ಟು; ವಿಲೇವಾರಿ ಮಾಡಬೇಕಾದ ಅವಧಿ ಮೀರಿರುವ ಅರ್ಜಿಗಳು ಎಷ್ಟು ಮತ್ತು ಅದಕ್ಕೆ ಕಾರಣಗಳೇನು ? (ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ರೋರೋಜಲ ಸಾರಿಗೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೮ (೧೯೯) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಂದರು ಮತ್ತು ಒಳನಾಡು ಜಲಸಾರಿಗೆ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಯಾವ ರೀತಿಯ ಕ್ರಮವಹಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಕರಾವಳಿ ಭಾಗದಲ್ಲಿ ಮಿತವ್ಯಯದ ಸಾರಿಗೆಯಾದ ಒಳನಾಡು ಜಲಸಾರಿಗೆ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಯಾವುದಾದರೂ ಹೊಸ ಯೋಜನೆ ರೂಪಿಸಲಾಗಿದೆಯೇ ;

(ಇ) ನವ ಮಂಗಳೂರು ಬಂದರುನಿಂದ ರೋರೋ ಮೂಲಕ ಸರಕುತುಂಬಿದ ಟ್ರಕ್‌ಗಳನ್ನು ಸಾಗಿಸುವ ಪ್ರಧಾನ ಉದ್ದೇಶದಿಂದ ಮಂಗಳೂರು ಮತ್ತು ಗುಜರಾತ್‌ನ ಹಾಜಿರಾ ನಡುವೆ ಇದ್ದ ಮಿತವೆಚ್ಚದ ಜಲ ಸಾರಿಗೆ ಪ್ರಸ್ತುತ ಸ್ಥಗಿತಗೊಂಡಿದ್ದು ಅದನ್ನು ಪುನಃ ಪ್ರಾರಂಭಿಸುವ ಯೋಚನೆ ಸರ್ಕಾರದ ಮುಂದಿದೆಯೇ ; ಖಾಸಗಿ ಸಹಭಾಗಿತ್ವದಲ್ಲಿ ಈ ವ್ಯವಸ್ಥೆಯನ್ನು ಪ್ರಾರಂಭಿಸಲು ಪ್ರಸ್ತಾವನೆ ತಯಾರಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅತಿಯಾದ ಮಳೆಯಿಂದಾಗಿ ಮತ್ತು ಮೀನುಗಾರಿಕಾ ವಾಹನಗಳ ಹೆಚ್ಚು ಸಾಂದ್ರತೆಯ (ರಿಪೀಟೆಡ್) ಸಂಚಾರದಿಂದಾಗಿ ಮೀನುಗಾರಿಕಾ ರಸ್ತೆಗಳು ಬೇಗನೆ ಹದಗೆಡುತ್ತಿದ್ದು ಇವುಗಳ ದುರಸ್ತಿಗಾಗಿ ಹೆಚ್ಚುವರಿ ಅನುದಾನ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಕ್ಫ್ ಆಸ್ತಿಗಳ ರಕ್ಷಣೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೯ (೧೭೬) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಕ್ಫ್ ಆಸ್ತಿಗಳ ರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಮೀಸಲಿಟ್ಟ ಅನುದಾನವೆಷ್ಟು ;

(ಆ) ೨೦೧೩ ರಿಂದ ಇಲ್ಲಿಯವರೆಗೆ ಮೀಸಲಿಟ್ಟ ಅನುದಾನ ಹಾಗೂ ಖರ್ಚಾದ ಅನುದಾನವೆಷ್ಟು : (ವಿವರ ಒದಗಿಸುವುದು)

(ಇ) ಭಾರತೀಯ ಪುರಾತತ್ವ ಇಲಾಖೆ ವ್ಯಾಪ್ತಿಯಡಿಯಲ್ಲಿ ವಕ್ಫ್ ಆಸ್ತಿಗಳನ್ನು ಅಭಿವೃದ್ಧಿಪಡಿಸಲು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಅಲ್ಪಸಂಖ್ಯಾತ ಸಮುದಾಯದವರ ಶಿಕ್ಷಣಾಭಿವೃದ್ಧಿ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೦ (೧೭೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಲ್ಪಸಂಖ್ಯಾತ ಸಮುದಾಯದವರ ಶಿಕ್ಷಣ ಅಭಿವೃದ್ಧಿಗೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಅಲ್ಪಸಂಖ್ಯಾತ ಶಾಲೆಗಳನ್ನು ಅಭಿವೃದ್ಧಿಗೊಳಿಸಲಾಗಿದೆ ; ಪದವಿ ಪೂರ್ವ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲು ಕೈಗೊಂಡ ಕ್ರಮಗಳೇನು ;

(ಇ) ಕಳೆದ ಎರಡು ವರ್ಷಗಳಲ್ಲಿ ಅಲ್ಪಸಂಖ್ಯಾತ ಸಮುದಾಯದ ಎಷ್ಟು ಶಾಲೆಗಳಲ್ಲಿ ಪದವಿ ಪೂರ್ವ ಶಿಕ್ಷಣವನ್ನು ಜಾರಿಗೊಳಿಸಲಾಗಿದೆ ? (ಮಾಹಿತಿ ಒದಗಿಸುವುದು)

## ಮಹಿಳೆಯರಿಗೆ ಹೈನುಗಾರಿಕೆಗಾಗಿ ಪ್ರೋತ್ಸಾಹ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೧ (೧೭೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಿಳೆಯರು ಹೈನುಗಾರಿಕೆಯಲ್ಲಿ ತೊಡಗಿಸಿಕೊಳ್ಳುವ ನಿಟ್ಟಿನಲ್ಲಿ ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಈ ಸಂಬಂಧ ತರಬೇತಿ ನೀಡಲಾಗುತ್ತಿದೆಯೇ ;

(ಆ) ಕಳೆದ ಹತ್ತು ವರ್ಷಗಳಲ್ಲಿ ಎಷ್ಟು ಮಹಿಳೆಯರಿಗೆ ತರಬೇತಿ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಈ ವೃತ್ತಿಯಲ್ಲಿ ಅತೀ ಕಡಿಮೆ ಆಸಕ್ತಿ ತೋರಿದ ಜಿಲ್ಲೆಗಳನ್ನು ಗುರುತಿಸಲಾಗಿದೆಯೇ ; ಈ ವೃತ್ತಿಯಲ್ಲಿ ಮಹಿಳೆಯರಿಗೆ ಆಸಕ್ತಿ ಹೆಚ್ಚಿಸಲು ಕೈಗೊಂಡ ಕ್ರಮಗಳೇನು ?

## ಅಮೃತ್ ಮಹಲ್ ಹಳ್ಳಿಕಾರ್ ತಳಿಗಳ ಅಭಿವೃದ್ಧಿ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೨ (೧೭೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಮೃತ್ ಮಹಲ್, ಹಳ್ಳಿಕಾರ್, ಕಿಲಾರಿ ತಳಿಗಳನ್ನು ಅಭಿವೃದ್ಧಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ಇದರ ಅಭಿವೃದ್ಧಿಗಾಗಿ ಎಷ್ಟು ಅನುದಾನ ಒದಗಿಸಲಾಗಿದೆ ? (ವರ್ಷವಾರು ಮಾಹಿತಿ ಒದಗಿಸುವುದು)

## ತಿರುಪತಿಯ ಕರ್ನಾಟಕ ಭವನದಲ್ಲಿ ವಸತಿ ಸೌಕರ್ಯ ಹೆಚ್ಚಿಸುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೩ (೧೫೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತಿರುಪತಿಯಲ್ಲಿರುವ ಕರ್ನಾಟಕ ಭವನದಲ್ಲಿ ಕರ್ನಾಟಕದಿಂದ ಹೋಗುವ ಜನರಿಗೆ ವಸತಿ ಸೌಲಭ್ಯ ದಿಂದ ವಂಚಿತರಾಗುತ್ತಿದ್ದು ಹೆಚ್ಚಿನ ವಸತಿ ಸೌಲಭ್ಯ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಹೊಸದಾಗಿ ಕಟ್ಟಡ ನಿರ್ಮಿಸುವ ಆಲೋಚನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದಲ್ಲಿ ಬಸ್‌ದರ ಹೆಚ್ಚು ಮಾಡಿರುವುದರಿಂದ ಜನರಿಗೆ ಉಂಟಾಗಿರುವ ತೊಂದರೆ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೪ (೧೫೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಸ್‌ದರವನ್ನು ಹೆಚ್ಚು ಮಾಡಿರುವುದರಿಂದ ಜನರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಾರಿಗೆ ಇಲಾಖೆಯಲ್ಲಿ ದಕ್ಷತೆಯನ್ನು ಹೆಚ್ಚಿಸಿ ಸೋರಿಕೆಯನ್ನು ತಡೆಗಟ್ಟಿ ಪ್ರಯಾಣದರವನ್ನು ಹಿಂದಿನಂತೆಯೇ ಮುಂದುವರೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಈ ಬಗ್ಗೆ ಸರ್ಕಾರ ಮರುಚಿಂತನೆ ನಡೆಸಿ ಜನರಿಗೆ ಅನುಕೂಲ ಮಾಡಿ ಕೊಡುವುದೇ ;

(ಈ) ಮಹಿಳೆಯರಿಗೆ ಉಚಿತ ಪ್ರಯಾಣಕ್ಕೆ ಅವಕಾಶ ಮಾಡಿಕೊಟ್ಟು ಪುರುಷರು ಮಾತ್ರ ಹೆಚ್ಚು ಹಣ ನೀಡಿ ಪ್ರಯಾಣ ಮಾಡಬೇಕೆಂಬ ನೀತಿಯಿಂದ ಗ್ರಾಹಕರಲ್ಲಿ ತಾರತಮ್ಯ ಮಾಡಿದಂತಾಗುವುದಿಲ್ಲವೇ ?

## ಇಲಾಖಾ ವತಿಯಿಂದ ನಿವೇಶನ ಹಂಚಿಕೆ ಮಾಡುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೫ (೧೮೬) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಡವರಿಗೆ, ದುರ್ಬಲ ವರ್ಗದವರಿಗೆ ಮತ್ತು ಕಡಿಮೆ ಆದಾಯ ಕುಟುಂಬಗಳಿಗೆ ಅಗ್ಗದ ದರಗಳಲ್ಲಿ ಯೋಗ್ಯವಾದ ವಾಸಸ್ಥಳ ನೀಡಲು ಇಲಾಖೆ ವತಿಯಿಂದ ಕಳೆದ ೩ ವರ್ಷಗಳಲ್ಲಿ ಎಷ್ಟು ನಿವೇಶನ/ಮನೆ ಹಂಚಿಕೆ ಮಾಡಲಾಗಿದೆ ;

(ಆ) ಕೆಲವೊಂದು ಅಧ್ಯಯನಗಳ ಪ್ರಕಾರ ಇವತ್ತಿಗೂ ರಾಜ್ಯದ ನಾಗರೀಕರಿಗೆ ೮೫ ಲಕ್ಷ ನಿವೇಶನಗಳ ಕೊರತೆ ಇರುವುದು ನಿಜವೇ ; ಇದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ಮತ್ತು ೨೦೨೪-೨೫ರಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಳಗಾವಿ ಜಿಲ್ಲೆಯನ್ನು ವಿಭಜಿಸುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೬ (೧೮೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ೨ನೇ ಅತೀ ದೊಡ್ಡ ಜಿಲ್ಲೆಯಾಗಿರುವ ಬೆಳಗಾವಿ ಜಿಲ್ಲೆಯನ್ನು ವಿಭಜನೆ ಮಾಡಲು ಸರ್ಕಾರ ನಿರ್ಧರಿಸಿದೆಯೇ ; ಹೌದಾದಲ್ಲಿ, ಬೆಳಗಾವಿ ಜಿಲ್ಲೆಯನ್ನು ಎಷ್ಟು ಜಿಲ್ಲೆಗಳಾಗಿ ವಿಭಜಿಸಲಾಗುವುದು ;

(ಆ) ಹೊಸದಾಗಿ ರಚಿಸುವ ಜಿಲ್ಲೆಗಳು ಎಷ್ಟು ಮತ್ತು ಯಾವ ಯಾವ ತಾಲ್ಲೂಕುಗಳನ್ನು ಸೇರಿಸಲಾಗುವುದು ?

## ಬೆಳಗಾವಿ ನಗರದಲ್ಲಿ ಫ್ಲೈಓವರ್ ನಿರ್ಮಿಸುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೭ (೧೮೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅತೀ ದೊಡ್ಡ ನಗರಗಳಲ್ಲಿ ಒಂದಾದ ಬೆಳಗಾವಿ ನಗರದಲ್ಲಿ ಫ್ಲೈಓವರ್ ನಿರ್ಮಿಸಲು ಈಗಾಗಲೇ ಕ್ರಮ ಕೈಗೊಂಡಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯದ ವತಿಯಿಂದ ಸದರಿ ಯೋಜನೆಯನ್ನು ಕೈಬಿಡುವಂತೆ ಆದೇಶಿಸಿರುವುದು ನಿಜವೇ ; ಇದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಆ) ಈಗ ಸದರಿ ಯೋಜನೆಯನ್ನು ಕೈಗೆತ್ತಿಕೊಳ್ಳಲು ಮತ್ತೊಮ್ಮೆ ಪ್ರಸ್ತಾವನೆಯನ್ನು ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಲಾಗಿದೆಯೇ ; ಇದ್ದಲ್ಲಿ, ಹೆಚ್ಚುವರಿಯಾಗಿ ಯಾವ ಬೇಡಿಕೆಗಳನ್ನು ಈ ಪ್ರಸ್ತಾವನೆಯಲ್ಲಿ ಸೇರಿಸಲಾಗಿದೆ ? (ಮಾಹಿತಿ ನೀಡುವುದು)

## ಬಿ.ಎಂ.ಟಿ.ಸಿ ಸಂಸ್ಥೆಯ ಡೀಸೆಲ್ ಬಸ್ಸುಗಳನ್ನು ವಿದ್ಯುತ್ ಚಾಲಿತ ಬಸ್ಸಗಳಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೮ (೧೮೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ರಾಜಧಾನಿಯ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಒಟ್ಟು ಇರುವ ಬಸ್ಸು ಸಂಖ್ಯೆ ಎಷ್ಟು ; ಗುತ್ತಿಗೆ ಪಡೆದ ಬಸ್ಸುಗಳು ಎಷ್ಟು ಮತ್ತು ಬಿ.ಎಂ.ಟಿ.ಸಿ ಒಡೆತನದ ಬಸ್ಸುಗಳು ಎಷ್ಟು ;

(ಆ) ಸದರಿ ಬಸ್ಸುಗಳಲ್ಲಿ ಡೀಸೆಲ್ ಬಸ್ಸುಗಳ ಸಂಖ್ಯೆ ಮತ್ತು ಯಾವ ವರ್ಷದಲ್ಲಿ ಖರೀದಿಸಲಾಗಿದೆ ; ಸದರಿ ಸಂಸ್ಥೆಯಲ್ಲಿ ವಿದ್ಯುತ್ ಚಾಲಿತ ಬಸ್ಸುಗಳ ಸಂಖ್ಯೆ ಎಷ್ಟು ;

(ಇ) ಡೀಸೆಲ್ ಬಸ್ಸುಗಳು ಸುಮಾರು ಹಲವು ಲಕ್ಷ ಕಿ.ಮೀ ಓಡಿದ ನಂತರ ಇವುಗಳನ್ನು ವಿದ್ಯುತ್ ಚಾಲಿತ ವಾಹನಗಳನ್ನಾಗಿ ಪರಿವರ್ತಿಸುತ್ತಿರುವುದು ದೇಶದ ಹಲವು ರಾಜ್ಯಗಳಲ್ಲಿ ಕಾಣಬಹುದಾಗಿದ್ದು, ಇದೇ ರೀತಿ ಕರ್ನಾಟಕ ರಾಜ್ಯದಲ್ಲಿ ದಿನನಿತ್ಯ ಬೆಂಗಳೂರಿನಲ್ಲಿ ಓಡಾಡುತ್ತಿರುವ ಡೀಸೆಲ್ ಬಸ್ಸುಗಳನ್ನು ವಿದ್ಯುತ್ ಚಾಲಿತ ವಾಹನಗಳನ್ನಾಗಿ ಪರಿವರ್ತಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಯಾವ ರಾಜ್ಯಗಳಿಂದ ಈ ಯೋಜನೆ ಕುರಿತು ಮಾಹಿತಿ ಪಡೆಯಲಾಗಿದೆ ; (ರಾಜ್ಯವಾರು ಮಾಹಿತಿ ನೀಡುವುದು)

(ಈ) ಬಿ.ಎಂ.ಟಿ.ಸಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಎಷ್ಟು ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಎಷ್ಟು ಕಾಲಮಿತಿಯಲ್ಲಿ ನೇಮಕಾತಿ ಮಾಡಲಾಗುವುದು ? (ಹುದ್ದೆವಾರು ಮಾಹಿತಿ ನೀಡುವುದು)

## ಸರ್ಕಾರಿ ಭೂಮಿಯನ್ನು ಒತ್ತುವರಿ ಮಾಡಿರುವ ಪ್ರಕರಣಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೯ (೧೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ನಡೆದಿರುವ ಸರ್ಕಾರಿ ಭೂಮಿ ಒತ್ತುವರಿ ಪ್ರಕರಣಗಳೆಷ್ಟು ; ಈ ಪೈಕಿ ಒತ್ತುವರಿ ತೆರವು ಮಾಡಿ ಮರು ವಶಪಡಿಸಿಕೊಂಡಿರುವ ಭೂಮಿ ಎಷ್ಟು ; ಈ ಭೂಮಿಯ ಒಟ್ಟು ಮೌಲ್ಯ ಎಷ್ಟು ; (ಜಿಲ್ಲಾವಾರು ಪೂರ್ಣ ವಿವರ ನೀಡುವುದು)

(ಆ) ಒತ್ತುವರಿದಾರರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ; ಒತ್ತುವರಿಯಿಂದ ತೆರವುಗೊಂಡಿರುವ ಜಾಗವನ್ನು ರಕ್ಷಿಸಲು ಕೈಗೊಂಡಿರುವ ಕ್ರಮಗಳೇನು ;

(ಇ) ಸರ್ಕಾರಿ ಜಮೀನು ಒತ್ತುವರಿಗೆ ಸಂಬಂಧಪಟ್ಟಂತೆ ಸರ್ಕಾರ ನೇಮಕ ಮಾಡಿದ್ದ ವಿವಿಧ ಸಮಿತಿಗಳು ನೀಡಿರುವ ವರದಿಗಳು ಯಾವುವು ; ಸದರಿ ವರದಿಗಳನ್ನು ಸರ್ಕಾರ ಅಂಗೀಕರಿಸಿದೆಯೇ ; ವರದಿಯಲ್ಲಿ ಪ್ರಸ್ತಾಪಿಸಿರುವ ಪ್ರಮುಖ ಅಂಶಗಳೇನು ;

(ಈ) ಸರ್ಕಾರಿ ಜಮೀನು ಒತ್ತುವರಿಗೆ ಅನುವು ಮಾಡಿಕೊಟ್ಟ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಿದ ಮೇಲೆ ಆಗಿರುವ ಪ್ರಗತಿ ಏನು ? (ಜಿಲ್ಲಾವಾರು ವಿವರ ನೀಡುವುದು)

## ಚಾಕಿ ಸಾಕಾಣಿಕಾ ಕೇಂದ್ರಗಳಿಗೆ ನೀಡುವ ಸಹಾಯಧನದ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦ (೧೨೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಸಹಾಯಧನ ಪಡೆದಿರುವ ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರಗಳು ಎಷ್ಟು ಮತ್ತು ಯಾವುವು ; (ಪ್ರತಿಯೊಂದು ಕೇಂದ್ರದ ಸಂಪೂರ್ಣ ವಿವರ ನೀಡುವುದು)

(ಆ) ಸಹಾಯಧನ ಪಡೆಯಲು ಪ್ರತಿಯೊಂದು ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರವು ಸಲ್ಲಿಸಿರುವ ವಿವಿಧ ರೀತಿಯ ದಾಖಲಾತಿಗಳು ಯಾವುವು ; ಪ್ರತಿಯೊಂದು ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರ ಸಲ್ಲಿಸಿರುವ ಎಲ್ಲಾ ಸಂಪೂರ್ಣ ದಾಖಲಾತಿಗಳ ಪ್ರತಿಗಳನ್ನು ಪ್ರತ್ಯೇಕವಾಗಿ ಒದಗಿಸುವುದು ;

(ಇ) ರಾಮನಗರ ಜಿಲ್ಲೆಯಲ್ಲಿ ಈಗಾಗಲೇ ಸಹಾಯಧನಕ್ಕೆ ಅರ್ಜಿ ಸಲ್ಲಿಸಿರುವ ಎಷ್ಟು ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರಗಳಿಗೆ ಪ್ರಸ್ತುತ ಸಹಾಯಧನ ನೀಡಲು ಇನ್ನೂ ಬಾಕಿ ಇದೆ ;

(ಈ) ಇದ್ದಲ್ಲಿ, ಆ ಕೇಂದ್ರಗಳಿಗೆ ಸಹಾಯಧನ ಇನ್ನೂ ಬಿಡುಗಡೆಯಾಗದಿರಲು ಕಾರಣಗಳೇನು ?

## ಗ್ರಾಮ ಆಡಳಿತ ಅಧಿಕಾರಿಗಳ ಮುಷ್ಕರ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೧ (೧೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಗ್ರಾಮ ಆಡಳಿತ ಅಧಿಕಾರಿಗಳು ಸಾಮೂಹಿಕ ರಜೆ ಹಾಕಿ ತಮ್ಮ ಸಮಸ್ಯೆಗಳ ಪರಿಹಾರ ಹಾಗೂ ನಾನಾ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಮುಷ್ಕರ ಆರಂಭಿಸಿರುವುದರಿಂದ ಇಡೀ ಗ್ರಾಮ ಆಡಳಿತ ವ್ಯವಸ್ಥೆ ಸ್ತಬ್ಧವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಹಿಂದೆ ಗ್ರಾಮ ಆಡಳಿತ ಅಧಿಕಾರಿಗಳು ಇದೇ ರೀತಿಯಲ್ಲಿ ಮುಷ್ಕರ ಹೂಡಿದ ಸಂದರ್ಭದಲ್ಲಿ ಸರ್ಕಾರ ಅವರ ಬೇಡಿಕೆಗಳ ಈಡೇರಿಕೆಗೆ ಭರವಸೆ ನೀಡಿದ್ದು, ಆ ಕುರಿತು ಇದುವರೆಗೆ ಏನು ಕ್ರಮ ಕೈಗೊಂಡಿದೆ ;

(ಇ) ಯಾವ ಕಾಲಮಿತಿಯೊಳಗೆ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆಗಳನ್ನು ಪರಿಹರಿಸುವುದರ ಜೊತೆಗೆ ಅವರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಅಗತ್ಯ ಕ್ರಮ ವಹಿಸಲಾಗುವುದು ?

## ಹಾಲಿನ ಪ್ರೋತ್ಸಾಹ ಧನ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೨ (೧೧೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೈನುಗಾರರಿಗೆ ಸರ್ಕಾರ ಪ್ರಸ್ತುತ ಪ್ರತೀ ಲೀಟರ್ ಹಾಲಿಗೆ ನೀಡುತ್ತಿರುವ ಹಾಲಿನ ಪ್ರೋತ್ಸಾಹ ಧನವೆಷ್ಟು ;

(ಆ) ಹಾಲಿನ ಪ್ರೋತ್ಸಾಹ ಧನವನ್ನು ಸರಿಯಾಗಿ ನಿಗದಿತ ಸಮಯಕ್ಕೆ ಪಾವತಿ ಮಾಡದೇ ಬಾಕಿ ಉಳಿಸಿಕೊಂಡಿರುವುದರಿಂದ ಹೈನುಗಾರರು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಹೈನುಗಾರರಿಗೆ ಪಾವತಿಸಲು ಪ್ರಸ್ತುತ ಬಾಕಿ ಇರುವ ಹಾಲಿನ ಪ್ರೋತ್ಸಾಹ ಧನದ ಮೊತ್ತವೆಷ್ಟು ;

(ಈ) ಯಾವ ಕಾಲಮಿತಿಯೊಳಗೆ ಬಾಕಿ ಇರುವ ಹಾಲಿನ ಪ್ರೋತ್ಸಾಹ ಧನವನ್ನು ಹೈನುಗಾರರಿಗೆ ಪಾವತಿಸಲಾಗುವುದು ?

## ಭೂ ಪರಿವರ್ತನೆಗೊಂಡ ಒಂದು ಎಕರೆ ಒಳಗಿನ ಜಮೀನುಗಳಿಗೆ ಏಕ ನಿವೇಶನದ ತಾಂತ್ರಿಕ ಅನುಮೋದನೆ ಪಡೆಯಲು ಆಗುತ್ತಿರುವ ತೊಂದರೆ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೩ (೧೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಭೂ ಪರಿವರ್ತನೆಗೊಂಡ ಒಂದು ಎಕರೆ ಒಳಗಿನ ಜಮೀನುಗಳಿಗೆ ಏಕ ನಿವೇಶನದ ತಾಂತ್ರಿಕ ಅನುಮೋದನೆಯನ್ನು

ಯೋಜನಾ ಪ್ರಾಧಿಕಾರದಿಂದ ಪಡೆಯಬೇಕೆಂಬ ಹೊಸ ಪದ್ಧತಿಯಿಂದಾಗಿ ಗ್ರಾಮೀಣ ಭಾಗದ ಜನರು ಸಾಕಷ್ಟು ಹೈರಾಣಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಹೊಸ ನಿಯಮದಿಂದಾಗಿ ಮನೆ ನಿರ್ಮಾಣಕ್ಕೆ ಬ್ಯಾಂಕ್‌ನಿಂದ ಸಾಲ ಪಡೆಯಲು ಆರ್ಥಿಕ ಸಂಕಷ್ಟದ ಕಾರಣಕ್ಕೆ ಜಮೀನು ಮಾರಾಟ ಮಾಡುವ ಅನಿವಾರ್ಯತೆ ಇರುವ ಬಡ ಹಾಗೂ ಮಧ್ಯಮ ವರ್ಗದ ಜನ ಸಾಕಷ್ಟು ಹೈರಾಣಾಗಿದ್ದು, ಈ ಸಮಸ್ಯೆ ಬಗೆಹರಿಸುವ ಸಲುವಾಗಿ ಸರ್ಕಾರ ಇದುವರೆಗೆ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ತಾಂತ್ರಿಕ ಕಾರಣ, ಸಿಬ್ಬಂದಿ ಕೊರತೆ ಹಾಗೂ ಕಠಿಣ ನಿಯಮಾವಳಿಗಳಿಂದಾಗಿ ಅರ್ಜಿಗಳ ವಿಲೇವಾರಿಗೆ ಪ್ರಸ್ತುತ ತುಂಬಾ ಸಮಯ ತೆಗೆದುಕೊಳ್ಳುತ್ತಿದ್ದು, ಆ ಕಾರಣದಿಂದಾಗಿ ಗ್ರಾಮೀಣ ಜನರಿಗೆ ಸಾಕಷ್ಟು ತೊಂದರೆಯಾಗುತ್ತಿದ್ದು, ಯಾವ ಕಾಲಮಿತಿಯೊಳಗೆ ಸದರಿ ಸಮಸ್ಯೆಯನ್ನು ಬಗೆಹರಿಸಲು ಅಗತ್ಯ ಕ್ರಮ ವಹಿಸಲಾಗುವುದು ?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ನಮೂನೆ ೫೦, ೫೩ ಹಾಗೂ ೫೭ರಡಿ ಸಲ್ಲಿಕೆಯಾದ ಅರ್ಜಿಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೪ (೧೨೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ನಮೂನೆ ೫೦, ೫೩ ಹಾಗೂ ನಮೂನೆ ೫೭ ರಲ್ಲಿ ಜಮೀನು ಮಂಜೂರು ಮಾಡುವಂತೆ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳನ್ನು ಪುರಸ್ಕರಿಸಿ ಎಷ್ಟು ಜನರಿಗೆ ಜಮೀನು ಮಂಜೂರು ಮಾಡಲಾಗಿದೆ ; ಎಷ್ಟು ಅರ್ಜಿಗಳನ್ನು ತಿರಸ್ಕರಿಸಲಾಗಿದೆ ; ತಿರಸ್ಕರಿಸಲು ಕಾರಣಗಳೇನು ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಇ) ಕಡೂರು ತಾಲ್ಲೂಕಿನಲ್ಲಿ ಈ ಹಿಂದೆ ಬಗರ್ ಹುಕುಂ ಸಕ್ರಮೀಕರಣ ಸಮಿತಿಯಲ್ಲಿ ಮಂಜೂರು ಮಾಡಿ ಸಾಗುವಳಿ ಚೀಟಿ ವಿತರಿಸಿ ಪಹಣಿ ನೀಡಿರುವ ಪ್ರಕರಣಗಳಲ್ಲಿ ರೈತರಿಗೆ ನೀಡಿದ್ದ ಮಂಜೂರಾತಿಯನ್ನು ರದ್ದುಪಡಿಸಲು ಸರ್ಕಾರದಿಂದ ನೇಮಿಸಿದ್ದ ತಹಸೀಲ್ದಾರ್‌ಗಳ ತಂಡದ ವರದಿ ಆಧಾರದ ಮೇಲೆ ತಹಸೀಲ್ದಾರ್ ಕಡೂರು ಇವರು ಸ್ವಯಂ ಪ್ರೇರಿತ ಮೇಲ್ಮನವಿ ಸಲ್ಲಿಸಿರುವುದರಿಂದ ರೈತರು ಆತಂಕಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತನಿಖಾ ವರದಿಯಲ್ಲಿ ಪ್ರಸ್ತಾಪಿಸಿರುವ ಪ್ರಮುಖ ಅಂಶಗಳೇನು ; (ತನಿಖಾ ವರದಿಯ ಪ್ರತಿ ಒದಗಿಸುವುದು)

(ಈ) ಈ ರೀತಿ ಮಂಜೂರಾತಿಯನ್ನು ರದ್ದುಪಡಿಸಿದ್ದಲ್ಲಿ ಅಧಿಕಾರಿಗಳು ಮಾಡಿದ ತಪ್ಪಿಗೆ ರೈತರಿಗೆ ಅನ್ಯಾಯವಾಗುವುದಿಲ್ಲವೇ ಇದರಿಂದ ಆತಂಕಕ್ಕೊಳಗಾಗಿರುವ ರೈತರ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ಒದಗಿಸುವುದು)

## ವೇತನ ಹೆಚ್ಚಳಕ್ಕೆ ಆಗ್ರಹಿಸಿ ಸಾರಿಗೆ ನೌಕರರು ಮುಷ್ಕರ ನಡೆಸಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫ (೧೨೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೇತನ ಹೆಚ್ಚಳ, ಹಿಂಬಾಕಿ ಪಾವತಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಸಾರಿಗೆ ನೌಕರರು ಅನಿರ್ಧಿಷ್ಟಾವಧಿ ಮುಷ್ಕರ ನಡೆಸಲು ಉದ್ದೇಶಿಸಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅವರ ಬೇಡಿಕೆಗಳು ಯಾವುವು ; ಈ ಹಿಂದೆ ಮುಷ್ಕರ ಕೈಗೊಂಡಿದ್ದ ವೇಳೆ ಎಷ್ಟು ಬೇಡಿಕೆಗಳ ಈಡೇರಿಕೆಗೆ ಸರ್ಕಾರ ಒಪ್ಪಿಗೆ ನೀಡಿತ್ತು ; ಈ ಪೈಕಿ ಈಡೇರಿರುವ ಬೇಡಿಕೆಗಳು ಯಾವುವು ;

(ಇ) ಸರ್ಕಾರ ಈ ಹಿಂದೆ ನೀಡಿದ್ದ ಭರವಸೆಯಂತೆ ಬೇಡಿಕೆಗಳನ್ನು ಈಡೇರಿಸದಿರಲು ಕಾರಣಗಳೇನು ; ನೌಕರರ ಬೇಡಿಕೆಗಳನ್ನು ಈಡೇರಿಸುವ ಕುರಿತು ಸರ್ಕಾರದ ನಿಲುವೇನು ; ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದಲ್ಲಿ ಶಕ್ತಿ ಯೋಜನೆ ಜಾರಿಗೊಂಡ ನಂತರ ಸಾರಿಗೆ ನಿಗಮಗಳ ಆರ್ಥಿಕ ಪರಿಸ್ಥಿತಿಯ ವಿವರ ನೀಡುವುದು ?

## Halal ಮಾಂಸ ಮಾರಾಟ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೬ (೨೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪರಿಶಿಷ್ಟ ಜಾತಿಯ ಕೆಲವು ಪಂಗಡದವರು ಮಾಂಸಕ್ಕಾಗಿ ಸಾಕುವ ಪ್ರಾಣಿಗಳ ವಧೆ ಮಾಡಿ ಅವುಗಳ ಮಾಂಸ ಮಾರಾಟ ಮಾಡುವ ಮೂಲಕ ತಮ್ಮ ದೈನಂದಿನ ಜೀವನ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಾಜ್ಯದಲ್ಲಿ ಈ ರೀತಿಯಲ್ಲಿ ಜೀವನ ಮಾಡುವ ಪರಿಶಿಷ್ಟ ಜಾತಿಯವರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ; ರಾಜ್ಯದಲ್ಲಿ ಇವರ ಜನ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಇತ್ತೀಚಿನ ವರ್ಷಗಳವರೆಗೂ ಅಂತರಾಷ್ಟ್ರೀಯ ಕಂಪನಿಗಳಾದ KFC ಸೇರಿದಂತೆ ಇನ್ನಿತರೆ ಸಂಸ್ಥೆಗಳು ಗ್ರಾಹಕರಿಗೆ ಸಿದ್ಧಪಡಿಸಲಾದ ಮಾಂಸಹಾರ ಪೂರೈಸುವ ಸಮಯದಲ್ಲಿ ಪರಿಶಿಷ್ಟ ಜಾತಿಯ ಮಾಂಸ ಮಾರಾಟಗಾರರಿಂದ ಮಾಂಸ ಖರೀದಿಸುತ್ತಿದ್ದು ಇದರಿಂದ ಪರಿಶಿಷ್ಟ ಜಾತಿಯವರು ತಮ್ಮ ದೈನಂದಿನ ಜೀವನ

ಸಾಗಿಸುತ್ತಿರುವುದು ಸರ್ಕಾರದ ಗಮಕ್ಕೆ ಬಂದಿದೆಯೇ, ಪ್ರಸ್ತುತ ಈ ಸಂಸ್ಥೆಗಳ ೧೦೦% ಹಲಾಲ್ ಮಾಂಸವನ್ನೇ ಖರೀದಿಸುತ್ತಿರುವುದರಿಂದ ಪರಿಶಿಷ್ಟ ಜಾತಿಯ ಮಾಂಸ ಮಾರಾಟಗಾರರು ತಮ್ಮ ಉದ್ಯೋಗವನ್ನೇ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು ;

(ಇ) ಅಂತರಾಷ್ಟ್ರೀಯ ಕಂಪನಿಗಳಾದ KFC ಸೇರಿದಂತೆ ಇನ್ನಿತರ ಸಂಸ್ಥೆಗಳು ೧೦೦% ಹಲಾಲ್ ಮಾಂಸವನ್ನೇ ಖರೀದಿಸುವ ಮೂಲಕ ಪರಿಶಿಷ್ಟ ಜಾತಿಯ ಮಾಂಸ ಮಾರಾಟಗಾರರಿಗೆ ಆರ್ಥಿಕ ಬಹಿಷ್ಕಾರ ವಿಧಿಸಿದಂತಾಗಿದ್ದು, ಅವರುಗಳ ಉದ್ಯೋಗವನ್ನು ಕಸಿದುಕೊಂಡ ಈ ಕಂಪನಿಗಳ ಮೇಲೆ ದಲಿತರ ಜೀವನಕ್ಕೆ ಧಕ್ಕೆಯುಂಟು ಮಾಡಿರುವುದಲ್ಲದೆ ಸಂವಿಧಾನವು ದೇಶದ ಎಲ್ಲಾ ನಾಗರೀಕರಿಗೆ ನೀಡಿದ ಮೂಲಭೂತ ಹಕ್ಕುಗಳಲ್ಲಿ ಒಂದಾದ ಬದುಕುವ ಹಕ್ಕನ್ನೇ ಕಸಿದುಕೊಂಡಂತಾಗಿದ್ದು ಪರಿಶಿಷ್ಟ ಜಾತಿಯವರು ಬದುಕುವ ಹಕ್ಕನ್ನೇ ಕಸಿದುಕೊಂಡಿರುವ ಕುರಿತು (ಅಟ್ರಾಸಿಟಿ) ಪ್ರಕರಣ ದಾಖಲು ಮಾಡುವ ಬಗ್ಗೆ ಸರ್ಕಾರದ ನಿಲುವೇನು ?

## ಸಮರ್ಥ ರಾಮದಾಸರ ಸಮಾಧಿ ಕುರಿತು

**ಶ್ರೀ ಎಸ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೭ (೨೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮರ್ಥ ರಾಮದಾಸರ ಸಮಾಧಿ ಇರುವ ಸ್ಥಳವು ಯಾರ ಅಧೀನದಲ್ಲಿದೆ; ಈ ಸಮಾಧಿಯು ಧಾರ್ಮಿಕ ದತ್ತಿ ಇಲಾಖೆಯ

ಸುಪರ್ದಿಯಲ್ಲಿದೆಯೇ ; ಇಲ್ಲವಾದಲ್ಲಿ, ಈ ಸಮಾಧಿಯನ್ನು ಧಾರ್ಮಿಕ ದತ್ತಿ ಇಲಾಖೆಯು ತನ್ನ ಸುಪರ್ದಿಗೆ ತೆಗೆದುಕೊಳ್ಳಲು ಯಾವ ಕ್ರಮ ಕೈಗೊಂಡಿದೆ ;

(ಅ) ಕಲಬುರಗಿ ಜಿಲ್ಲೆಯಲ್ಲಿರುವ ಅಳಂದ ನಗರದ ಈ ಸಮಾಧಿಯ ಬಳಿಯಲ್ಲಿರುವ ಶಿವ ಲಿಂಗವು ಎಷ್ಟು ವರ್ಷಗಳ ಇತಿಹಾಸವನ್ನು ಹೊಂದಿದೆ; ಈ ಶಿವಲಿಂಗಕ್ಕೆ ಪೂಜೆ ಮಾಡಲು ಅನುಮತಿ ನೀಡದಿರಲು ಕಾರಣವೇನು ? (ವಿವರ ನೀಡುವುದು)

## ದೇವಸ್ಥಾನ ಹೊಂದಿರುವ ಜಮೀನುಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೮ (೨೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಜರಾಯಿ ಇಲಾಖೆಯ ದೇವಸ್ಥಾನಗಳು ಪ್ರಸ್ತುತ ಎಷ್ಟು ಎಕರೆ ಭೂಮಿಯನ್ನು ಹೊಂದಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಭೂ ಸುಧಾರಣಾ ಕಾಯ್ದೆಯ ಅನ್ವಯ ಉಳುವವನೇ ಹೊಲದೊಡೆಯ ಎಂಬ ಕಾನೂನು ಬರುವ ಮೊದಲು ಮುಜರಾಯಿ ದೇವಸ್ಥಾನಗಳು ಹೊಂದಿದ್ದ ಭೂಮಿ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ದೇವಸ್ಥಾನದ ಭೂಮಿಯಲ್ಲಿ ಯಾವ ಯಾವ ರೀತಿಯ ಶಾಶ್ವತ ನಿರ್ಮಾಣಗಳನ್ನು ಮಾಡಲಾಗಿದೆ ; (ಜಿಲ್ಲಾವಾರು, ದೇವಸ್ಥಾನವಾರು ಮಾಹಿತಿ ನೀಡುವುದು)

(ಈ) ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ಶಿಕ್ಷಣ ಸಂಸ್ಥೆಗಳನ್ನು ನಡೆಸಲಾಗುತ್ತಿದೆಯೇ ? (ಶಿಕ್ಷಣ ಸಂಸ್ಥೆಯ ಹೆಸರಿನೊಂದಿಗೆ ಜಿಲ್ಲಾವಾರು ವಿವರ ನೀಡುವುದು)

## RTO ಕಛೇರಿಯಲ್ಲಿ ದಲ್ಲಾಳಿಗಳ ಹಾವಳಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೯ (೩೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರಿಗೆ ಕಛೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿ ಮಿತಿ ಮೀರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಮಧ್ಯವರ್ತಿಗಳನ್ನು ನಿಯಂತ್ರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಕಳೆದ ೦೨ ವರ್ಷಗಳಲ್ಲಿ ಬೆಂಗಳೂರು ನಗರದ ಎಷ್ಟು ಸಾರಿಗೆ ಅಧಿಕಾರಿಗಳನ್ನು ಭ್ರಷ್ಟಾಚಾರ ಆರೋಪದ ಪ್ರಕರಣಕ್ಕೆ, ಅಮಾನತ್ತು ಮಾಡಿ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ; (ಹೆಸರಿನೊಂದಿಗೆ ವಿವರ ನೀಡುವುದು)

(ಇ) ಕಳೆದ ೦೨ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಸಾರಿಗೆ ಕಛೇರಿಗಳ ಮೇಲೆ ಎಸಿಬಿ ದಾಳಿಯಾಗಿದೆ ; ಈ ದಾಳಿಯಲ್ಲಿ ಸಿಕ್ಕಿ ಹಾಕಿಕೊಂಡಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಹೆಚ್.ಎಸ್.ಆರ್ ಲೇಔಟ್‌ನಲ್ಲಿರುವ ಬೆಂಗಳೂರು KA 01 RTO ಕಛೇರಿಗೆ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಹಿರಿಯ ಅಧಿಕಾರಿಗಳು ಭೇಟಿ ನೀಡಿದ್ದಾರೆ ? (ಭೇಟಿ ನೀಡಿದ ದಿನಾಂಕ ಮತ್ತು ಅಧಿಕಾರಿಗಳ ಹೆಸರಿನೊಂದಿಗೆ ಮಾಹಿತಿ ನೀಡುವುದು)

## ದೇವಸ್ಥಾನಗಳ ಭೂಮಿಯ ಅಕ್ರಮ ಒತ್ತುವರಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೦ (೩೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದೇವಸ್ಥಾನಗಳ ಉಂಬಳಿ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯ ಅನ್ವಯ ಪಡೆದುಕೊಂಡು ಕೃಷಿ ಚಟುವಟಿಕೆ ನಡೆಸದೆ ಮಾರಾಟ ಮಾಡಿರುವ ಉದಾಹರಣೆಗಳು ಎಷ್ಟಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ದೇವಸ್ಥಾನಗಳ ಉಂಬಳಿ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯ ಅನ್ವಯ ಪಡೆದುಕೊಂಡು ಕೃಷಿ ಚಟುವಟಿಕೆ ನಡೆಸದೆ ಇರುವ ಭೂಮಿಯನ್ನು ಹಿಂಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ದೇವಸ್ಥಾನಗಳ ಉಂಬಳಿ ಭೂಮಿಯು ಅನ್ಯ ಮತೀಯರು ಖರೀದಿಸಿ, ದೇವಸ್ಥಾನದ ಸ್ಥಳದ ಸಮೀಪವೇ ಆ ಮತೀಯರ ಪ್ರಾರ್ಥನಾ ಸ್ಥಳಗಳನ್ನು ನಿರ್ಮಿಸಿರುವ ಎಷ್ಟು ಪ್ರಕರಣಗಳು ವರದಿಯಾಗಿವೆ ;

(ಈ) ಒಂದು ಬಾರಿ ದೇವಸ್ಥಾನದ ಭೂಮಿ ಎಂದು ಪರಿಗಣಿಸಿದ ಬಳಿಕ ಅದು ಯಾವುದೇ ಕಾಲದಲ್ಲೂ ದೇವಸ್ಥಾನದ ಭೂಮಿಯೇ ಆಗಿರುವಂತೆ ಮಾಡಲು ಯಾವ ಕಾನೂನು ಕ್ರಮ ಕೈಗೊಳ್ಳಲಾಗಿದೆ ; ಈ ಕುರಿತು ಹೊಸ ಕಾನೂನು ಜಾರಿಗೆ ತರಲು ಸರ್ಕಾರ ಚಿಂತನೆ ನಡೆಸಿದೆಯೇ ; ನಡೆಸಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು ?

## ಮೋಜಿಣಿ ಇಲಾಖೆಯಡಿ ಪೋಡಿ ಹದ್ದುಬಸ್ತು ಅರ್ಜಿಗಳ ವಿಲೇವಾರಿಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೧೪೧ (೨೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೋಜಿಣಿ ಇಲಾಖೆಯಡಿ ಪೋಡಿ, ಹದ್ದುಬಸ್ತು, ಇ-ಸ್ವತ್ತು, ಸ್ಕೆಚ್ ಮುಂತಾದ ಅರ್ಜಿಗಳು ವರ್ಷಗಟ್ಟಲೆ ವಿಲೇವಾರಿಯಾಗದೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ವಿಳಂಬಕ್ಕೆ ಕಾರಣವಾದ ಸಿಬ್ಬಂದಿ ಕೊರತೆ ಮತ್ತು ತಾಂತ್ರಿಕ ದೋಷದಂತಹ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಮಾಹಿತಿ ನೀಡುವುದು) ರಾಜ್ಯದಲ್ಲಿ ಉಪ ನೋಂದಣಿ ಕಛೇರಿಗಳ ಮೇಲೆ ತುಂಬಾ ಒತ್ತಡಗಳಿದ್ದು, ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನೂತನವಾಗಿ ರಚನೆಂಯಾಗಿರುವ ಹೊಸ ತಾಲ್ಲೂಕುಗಳಲ್ಲಿ ಉಪ ನೋಂದಣಾಧಿಕಾರಿ ಕಛೇರಿ ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ?

## ಮೀನುಗಾರರಿಗಾಗಿ ಜಾರಿಯಲ್ಲಿರುವ ಯೋಜನೆಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೧೪೨ (೨೩) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಮೀನುಗಾರಿಕೆ ಇಲಾಖೆಯಲ್ಲಿ ಮೀನುಗಾರರಿಗಾಗಿ ಜಾರಿಯಲ್ಲಿರುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಮೀನುಗಾರಿಕೆಯಲ್ಲಿ ತೊಡಗಿಸಿಕೊಂಡಿರುವ ವ್ಯಕ್ತಿಗಳು ಸ್ವಾವಲಂಬಿ ಜೀವನ ನಡೆಸಲು ಉಪಯೋಗವಾಗುವ ಯೋಜನೆಗಳನ್ನು ಜಾರಿಮಾಡಲಾಗಿದೆಯೇ ? (ಯೋಜನೆಗಳ ವಿವರ ನೀಡುವುದು)

## ಕಂದಾಯ ಇಲಾಖೆಯ ಗ್ರಾಮ ಆಡಳಿತಾಧಿಕಾರಿಗಳು ಮುಷ್ಕರ ನಡೆಸುತ್ತಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೪೩ (೧೨೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಾದ್ಯಂತ ಕಂದಾಯ ಇಲಾಖೆಯ ಗ್ರಾಮ ಆಡಳಿತಾಧಿಕಾರಿಗಳು ಮೂಲಭೂತ ಸೌಕರ್ಯ ಒದಗಿಸಲು ಎರಡನೇ ಬಾರಿ ಮುಷ್ಕರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗ್ರಾಮ ಆಡಳಿತಾಧಿಕಾರಿಗಳ ಮುಷ್ಕರದ ಬೇಡಿಕೆಗಳೇನು ; ಈ ಮುಷ್ಕರದಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ತೀರ್ಮಾನಗಳೇನು ; (ಮಾಹಿತಿ ಒದಗಿಸುವುದು)

(ಇ) ಗ್ರಾಮ ಆಡಳಿತಾಧಿಕಾರಿಗಳು ನಡೆಸುತ್ತಿರುವ ಮುಷ್ಕರವನ್ನು ಹಿಂಪಡೆಯಲು ಸರ್ಕಾರದಿಂದ ಯಾವ ಕ್ರಮ ಜರುಗಿಸಲಾಗಿದೆ ? (ಮಾಹಿತಿ ಒದಗಿಸುವುದು)

## ಹೊರ ರಾಜ್ಯಗಳಲ್ಲಿರುವ ಮುಜರಾಯಿ ಇಲಾಖೆಯ ಆಸ್ತಿಗಳ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೪ (೧೭೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸಕ್ತ ಹಣಕಾಸಿನ ವರ್ಷದಲ್ಲಿ ಮುಜರಾಯಿ ಇಲಾಖೆಯ ದೇವಸ್ಥಾನಗಳಿಂದ ಸರ್ಕಾರಕ್ಕೆ ಬಂದಿರುವ ಒಟ್ಟು ಆದಾಯವೆಷ್ಟು; (ದೇವಸ್ಥಾನವಾರು ಮಾಹಿತಿ ನೀಡುವುದು)

(ಆ) ಸರ್ಕಾರದಿಂದ ಕಾಶಿ ವಿಶ್ವನಾಥ ಮತ್ತು ತಿರುಪತಿ ದೇವಸ್ಥಾನಗಳಲ್ಲಿ ಕರ್ನಾಟಕ ಭವನಗಳನ್ನು ನಿರ್ಮಾಣ ಮಾಡಲಾಗಿದೆಯೇ : ಮಾಡಿದ್ದಲ್ಲಿ, ಯಾವ ವರ್ಷ ನಿರ್ಮಾಣ ಮಾಡಲಾಗಿದೆ ;

(ಇ) ಕಾಶಿ ಮತ್ತು ತಿರುಪತಿಯಲ್ಲಿ ಇರುವ ರಾಜ್ಯದ ಮುಜರಾಯಿ ಇಲಾಖೆಯ ಆಸ್ತಿ ಹಾಗೂ ಅಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಮಾಹಿತಿ ನೀಡುವುದು ;

(ಈ) ಈ ಕರ್ನಾಟಕ ಭವನಗಳ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ ಮತ್ತು ೨೦೨೩-೨೪ನೇ ಸಾಲಿನಿಂದ ಇಲ್ಲಿಯವರೆಗೆ ಈ ಭವನಗಳ ನಿರ್ವಹಣೆ ಮತ್ತು ಅಭಿವೃದ್ಧಿಗೆ ಸರ್ಕಾರದಿಂದ ಬಿಡುಗಡೆ ಮಾಡಲಾದ ಅನುದಾನವೆಷ್ಟು ? (ಕಾಮಗಾರಿವಾರು ಮಾಹಿತಿ ನೀಡುವುದು)

## ಶ್ರೀ ಕ್ಷೇತ್ರ ಗಾಣಗಾಪುರ ದತ್ತಾತ್ರೇಯ ದೇವಸ್ಥಾನದ ಅಭಿವೃದ್ಧಿ ಕುರಿತು

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೪೫ (೧೮೨) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆ, ಅಫಜಲಪುರ ತಾಲ್ಲೂಕಿನ ಗಾಣಗಾಪುರದ ಶ್ರೀ ಕ್ಷೇತ್ರ ದತ್ತಾತ್ರೇಯ ದೇವಸ್ಥಾನದಲ್ಲಿ ಪ್ರತೀ ತಿಂಗಳು

ಸಂಗ್ರಹವಾಗುತ್ತಿರುವ ಹಣ ಎಷ್ಟು ; (ಕಳೆದ ಒಂದು ವರ್ಷದ ವಿವರ ನೀಡುವುದು)

(ಆ) ಈ ದೇವಸ್ಥಾನದ ಅಭಿವೃದ್ಧಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಸದರಿ ದೇವಸ್ಥಾನದ ಅಭಿವೃದ್ಧಿಗಾಗಿ ಸರ್ಕಾರವು ಮೀಸಲಿಟ್ಟ ಮತ್ತು ಇದುವರೆವಿಗೂ ಬಿಡುಗಡೆ ಮಾಡಲಾದ ಅನುದಾನ ಎಷ್ಟು;

(ಇ) ಸದರಿ ದೇವಸ್ಥಾನದ ಅಭಿವೃದ್ಧಿಗಾಗಿ ಸರ್ಕಾರ ಸಿದ್ಧಪಡಿಸಿರುವ ವಿಸ್ಕೃತ ಯೋಜನಾ ವರದಿಯ ನೀಲಿ ನಕ್ಷೆಯನ್ನು ನೀಡುವುದು;

(ಈ) ಇದುವರೆಗೂ ಈ ದೇವಸ್ಥಾನದ ಅಭಿವೃದ್ಧಿಗಾಗಿ ಕೈಗೊಂಡ ಕಾಮಗಾರಿಗಳು ಯಾವುವು ಮತ್ತು ಯಾವ ಕಾಲಮಿತಿಯಲ್ಲಿ ಉಳಿದ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಉತ್ತರ ಕನ್ನಡ ಜಿಲ್ಲೆಯ ಕಾಡು ಪ್ರಾಣಿಗಳ ಅತಿಕ್ರಮಣ ಮತ್ತು ಬೆಳೆಹಾನಿಗೆ ಪರಿಹಾರ ನೀಡುವ ಕುರಿತು

**ಶ್ರೀ ಶಾಂತರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೧೪೬ (೧೫೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಲೆನಾಡಿನ ರೈತರಿಗೆ ಸೋಪ್ಪಿನ ಬೆಟ್ಟ, ಕುಮಕಿ, ಸ್ಟ್ರೀಪ್ ಬಳಕೆ, ಪಾರಂಪರಿಕ ಅತಿ ಕ್ರಮಣ ಮತ್ತು ಕಾಡುಪ್ರಾಣಿಗಳಿಂದ ಆಗುತ್ತಿರುವ ಜೀವಹಾನಿ ಮತ್ತು ಬೆಳೆಹಾನಿಗೆ ಪರಿಹಾರ ನೀಡುವುದರಲ್ಲಿ ಆಗುವ ತೊಂದರೆ ಕುರಿತು ರೈತರ ಹಕ್ಕು ಸಂರಕ್ಷಣಾ ಸಮಿತಿ ಉತ್ತರ

ಕನ್ನಡ ಜಿಲ್ಲೆ ಇವರು ಉತ್ತರ ಕನ್ನಡ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿರುವ ಮನವಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ತಾಳಗುಪ್ಪ–ಅಳ್ನಾವರ ರಾಜ್ಯ ಹೆದ್ದಾರಿ ಅಗಲಿಕರಣ ಕುರಿತು

**ಶ್ರೀ ಶಾಂತರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೧೪೭ (೧೪೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಾಳಗುಪ್ಪದಿಂದ ಅಳ್ನಾವರವರೆಗಿನ ರಾಜ್ಯ ಹೆದ್ದಾರಿ ಅಗಲೀಕರಣ ಪ್ರಕ್ರಿಯೆಯು ಯಾವ ಹಂತದಲ್ಲಿದೆ ;

(ಆ) ಸದರಿ ರಾಜ್ಯ ಹೆದ್ದಾರಿ ಕಾಮಗಾರಿಯನ್ನು ತ್ವರಿತಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಕಾಮಗಾರಿಯನ್ನು ಪೂರ್ಣಗೊಳಿಸಲು ತೆಗೆದುಕೊಳ್ಳುವ ಕಾಲಾವಕಾಶವೆಷ್ಟು ?

## ಬೀದರ್ ನಗರದಲ್ಲಿರುವ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಮೂಲಭೂತ ಸೌಕರ್ಯಗಳ ಕೊರತೆ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೪೮ (೨೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರದಲ್ಲಿರುವ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಂಯು

ಸ್ಥಾಪನೆಗೊಂಡು ೨೦ ವರ್ಷಗಳಾದರೂ ಸರ್ಕಾರ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸದಿರಲು ಕಾರಣಗಳೇನು ;

(ಆ) ತೀರಾ ಹಿಂದುಳಿದ ಜಿಲ್ಲೆಯಲ್ಲಿ ಸ್ಥಾಪನೆಯಾದ ಈ ವಿಶ್ವವಿದ್ಯಾಲಯವು ಗ್ರಂಥಾಲಯ ಕಟ್ಟಡದಲ್ಲಿ ನಡೆಯುತ್ತಿರುವುದು ಸರಿಯೇ ;

(ಇ) ವಿವಿಧ ವಿಭಾಗಗಳಿಗೆ ಸಂಶೋಧನೆಗೆ, ಲ್ಯಾಬೋರೆಟರಿಗಳಿಗೆ ಮತ್ತು ಆಡಳಿತ ಪರೀಕ್ಷಾ ವಿಭಾಗಗಳಿಗೆ ಸ್ವತಂತ್ರ ಕಟ್ಟಡಗಳ ನಿರ್ಮಾಣ ಮಾಡಲು ಮತ್ತು ಇನ್ನಿತರ ಮೂಲಭೂತ ಸೌಕರ್ಯ ಮತ್ತು ಪೂರೈಕೆಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ವಿಶ್ವವಿದ್ಯಾಲಯದಲ್ಲಿ ಶೇ.೭೦%ರಷ್ಟು ಭೋಧಕ ಮತ್ತು ಭೋದಕೇತರ ಹುದ್ದೆಗಳು ಖಾಲಿಯಿದ್ದು ಅವುಗಳನ್ನು ತುಂಬಲು ಕ್ರಮ ಕೈಗೊಳ್ಳುವುದೇ ?

## ಡಾ: ಗಂಗೂಬಾಯಿ ಹಾನಗಲ್ ಗುರುಕುಲ ಡೋಲಾಯವಾನ ಸ್ಥಿತಿ ಮತ್ತು ಸಮಸ್ಯೆಗಳ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೧೪೯ (೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹುಬ್ಬಳ್ಳಿಯಲ್ಲಿ ಸ್ಥಾಪಿತವಾದ ಡಾ: ಗಂಗೂಬಾಯಿ ಹಾನಗಲ್ ಗುರುಕುಲ ಟ್ರಸ್ಟ್‌ಗೆ ಕರ್ನಾಟಕ ಸರಕಾರ ಪ್ರತಿ ವರ್ಷ ನೀಡುತ್ತಿರುವ ಅನುದಾನವೆಷ್ಟು ; (ಐದು ವರ್ಷಗಳ ಅನುದಾನದ ವಿವರ ನೀಡುವುದು)

(ಆ) ಈ ಗುರುಕುಲಕ್ಕೆ ಅನುದಾನದ ಕೊರತೆ, ಸಂಗೀತ ಶಿಕ್ಷಕರ ಕೊರತೆ, ಕರ್ನಾಟಕದ ವಿದ್ಯಾರ್ಥಿಗಳ ಆಯ್ಕೆಯಲ್ಲಿ ತಾರತಮ್ಯ ವಿದ್ಯಾರ್ಥಿಗಳಿ

ಮೂಲಭೂತ ಸೌಕರ್ಯಗಳ ಕೊರತೆ ಮುಂತಾದ ಸಮಸ್ಯೆಗಳಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಷ್ಟ್ರದ ಪ್ರಸಿದ್ಧ ಗಾಯಕಿಯ ಹೆಸರಿನಲ್ಲಿರುವ ಗುರುಕುಲ ಇಂದು ಕೆಲವೇ ವ್ಯಕ್ತಿಗಳ ಗಂಜಿ ಕೇಂದ್ರವಾಗಿದ್ದು, ಅದರ ಪುನಶ್ಚೇತನ ಮಾಡಿ ಸಂಗೀತ ಗುರುಗಳಿಗೆ ಪ್ರತಿ ತಿಂಗಳು ಗೌರವ ಧನ ನೀಡಿ ಈ ಗುರುಕುಲ ಬೆಳೆಸಲು ಸರಕಾರದ ನಿಲುವೇನು ;

(ಈ) ಸಾಮಾನ್ಯ ರೂಢಿಯಂತೆ ಗುರುಕುಲವನ್ನು ಕಂದಾಯ ಇಲಾಖೆಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯುಗೆ ವರ್ಗಾಯಿಸದಿರಲು ಕಾರಣವೇನು ;

(ಉ) ಉತ್ತರ ಕರ್ನಾಟಕದ ಹುಬ್ಬಳ್ಳಿಯಲ್ಲಿನ ಈ ಗುರುಕುಲವನ್ನು ಪೂರ್ಣ ಪ್ರಮಾಣದ ಸಂಗೀತ ವಿಶ್ವವಿದ್ಯಾಲಯವನ್ನಾಗಿ ಸ್ಥಾಪಿಸುವ ನಿಟ್ಟಿನಲ್ಲಿ ಸರಕಾರ ತೆಗೆದುಕೊಳ್ಳುವ ಕ್ರಮವೇನು ?

## ಕರಾವಳಿ ವಲಯ ನಿರ್ವಹಣೆ ವ್ಯಾಪ್ತಿ ಕುರಿತು

**ಶ್ರೀ ತಿಪ್ಪಣ್ಣನ ಕಮಕನೂರು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೦ (೧೩೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕರಾವಳಿ ವಲಯ ನಿರ್ವಹಣೆಯ ವ್ಯಾಪ್ತಿಗೆ ಬರುವ ಪ್ರದೇಶದ ಗ್ರಾಮವಾರು ಕಂದಾಯ ಭೂಮಿ ಸರ್ವೆ ನಂಬರ್ ಹಿಸ್ಸಾಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಸದರಿ ಗ್ರಾಮದಲ್ಲಿ ಕಳೆದ ೧೦ ವರ್ಷದಲ್ಲಿ ಕಡಲ ಕೊರೆತಕ್ಕೆ ತುತ್ತಾದ ಸರ್ವೆ ನಂಬರ್ ಹಿಸ್ಸಾಗಳು ಯಾವುವು ;

(ಇ) ಈ ಗ್ರಾಮಗಳಲ್ಲಿ ಸಮುದ್ರ ವಿಕೋಪ, ಭೂ ಕೊರೆತ, ನದಿ ಪ್ರವಾಹಗಳಿಗೆ ತುತ್ತಾದ ಕೃಷಿ ಭೂಮಿ ಎಷ್ಟು ; ಸರ್ಕಾರ ಒದಗಿಸಿದ ಪರಿಹಾರ ಕಾರ್ಯಗಳು ಯಾವುವು ; ಭೂಮಿ ಕಳೆದು ಕೊಂಡವರಿಗೆ ನೀಡಿದ ಪರಿಹಾರವೆಷ್ಟು ?

## ಹೊನ್ನಾವರ, ಪಾವಿನಕೂರ್ವಾ ಮತ್ತು ಮಂಕಿ ಬಂದರುಗಳ ಬಗ್ಗೆ

**ಶ್ರೀ ತಿಪ್ಪಣ್ಣನ ಕಮಕನೂರು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೧ (೧೪೩) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೊನ್ನಾವರ, ಪಾವಿನಕೂರ್ವಾ ಮತ್ತು ಮಂಕಿ ಬಂದರುಗಳ ಭೂ ಮತ್ತು ಜಲ ವ್ಯಾಪ್ತಿ ಹಾಗೂ ಕ್ಷೇತ್ರಗಳ ವಿವರವೆಷ್ಟು ; (ಮಾಹಿತಿ ನೀಡುವುದು)

(ಆ) ಸದರಿ ಬಂದರುಗಳ ಭೂ ಮತ್ತು ಜಲ ವ್ಯಾಪ್ತಿಗಳು ಅಧಿಸೂಚನೆಗಳು ಯಾವ ವರ್ಷದಲ್ಲಿ ಘೋಷಣೆಯಾಗಿವೆ ; (ದಾಖಲೆ ಒದಗಿಸುವುದು)

(ಇ) ಸದರಿ ಬಂದರು ಜಲ ವ್ಯಾಪ್ತಿಗಳ ಅಧಿಸೂಚನೆಗಳಿಗೆ ಕೇಂದ್ರ ಬಂದರುಗಳು ಹಡಗು ಮತ್ತು ಜಲಮಾರ್ಗಗಳ ಸಚಿವಾಲಯದ ಅನುಮತಿ ಪಡೆಯಲಾಗಿದೆಯೇ ;

(ಈ) ಸದರಿ ಬಂದರುಗಳ ಭೂ ಮತ್ತು ಜಲ ವ್ಯಾಪ್ತಿ ಪ್ರದೇಶದಲ್ಲಿ ಸಾರ್ವಜನಿಕ ಹಾಗೂ ಸಾಂಪ್ರದಾಯಿಕ ಮೀನುಗಾರಿಕೆಗೆ ಇರುವ ನಿಬಂಧನೆಗಳೇನು ?

## ಪಶು ಆಸ್ಪತ್ರೆಗಳನ್ನು ಸ್ಥಳಾಂತರಿಸುವ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೨ (೧೬೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ನಗರಗಳು, ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕೆಲವು ಪಶು ಆಸ್ಪತ್ರೆಗಳ ಬಳಕೆ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಪಶು ಆಸ್ಪತ್ರೆಗಳನ್ನು ಗುರುತಿಸಲಾಗಿದೆಯೇ ; (ವಿವರ ಒದಗಿಸುವುದು)

(ಆ) ಗುರುತಿಸಿದಲ್ಲಿ ಇಂತಹ ಆಸ್ಪತ್ರೆಗಳನ್ನು ಗ್ರಾಮೀಣ ಭಾಗಗಳಿಗೆ ಸ್ಥಳಾಂತರಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ರಾಜ್ಯಾದ್ಯಂತ ಹೆಚ್ಚಿನ ನಾಡ ಕಛೇರಿಗಳು ಮತ್ತು ಕಿಯೋನಿಕ್ಸ್‌ಗಳನ್ನು ಸ್ಥಾಪಿಸುವ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೩ (೧೬೭೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಂದಾಯ ಇಲಾಖೆ ಡಿಜಿಟಲೀಕರಣವು ಗ್ರಾಮೀಣ ಭಾಗಕ್ಕೆ ತಲುಪಲು ಹೆಚ್ಚಿನ ನಾಡ ಕಛೇರಿಗಳು ಮತ್ತು ಪ್ರತಿ ಗ್ರಾಮಗಳಲ್ಲಿ ಕಂದಾಯ ಕಿಯೋನಿಕ್ಸ್‌ಗಳನ್ನು ತೆರೆಯುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಹೊಸ ನಾಡ ಕಛೇರಿಗಳನ್ನು ತೆರೆಯಲು ಸರ್ಕಾರವು ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ಒದಗಿಸುವುದು)

(ಇ) ಕಳೆದ ಐದು ವರ್ಷಗಳಲ್ಲಿ ಎಷ್ಟು ಹೊಸ ನಾಡ ಕಛೇರಿಗಳನ್ನು ತೆರೆಯಲಾಗಿದೆ ; ಈ ನಾಡ ಕಛೇರಿಗಳ ಸ್ಥಾಪನೆಗೆ ಒದಗಿಸಿರುವ ಅನುದಾನವೆಷ್ಟು ? (ವಿವರ ಒದಗಿಸುವುದು)

## ಮಹಿಳೆಯರ ಉಪಯೋಗಕ್ಕಾಗಿ ಪ್ರತ್ಯೇಕ ಹೆಚ್ಚು ಪಿಂಕ್ ಬಸ್‌ಗಳ ಒದಗಿಸುವ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೪ (೧೬೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಸರ್ಕಾರದ ಮಹತ್ವಕಾಂಕ್ಷೆ ಯೋಜನೆಯಾದ "ಶಕ್ತಿ ಯೋಜನೆ" ಜಾರಿಗೆ ಬಂದ ನಂತರ ಬಸ್‌ಗಳಲ್ಲಿ ಪ್ರಯಾಣಿಸುವ ಮಹಿಳೆಯರ ಸಂಖ್ಯೆ ಹೆಚ್ಚಾಗಿದ್ದು, ಹೆಚ್ಚಿನ ಭದ್ರತೆಯ ಅವಶ್ಯಕತೆಯಿರುವುದರಿಂದ ಮಹಿಳೆಯರಿಗಾಗಿಯೇ ರಾಜ್ಯದಾದ್ಯಂತ ಪ್ರತ್ಯೇಕ ಬಸ್ (ಪಿಂಕ್ ಬಸ್)ಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಂದಾಯ ಇಲಾಖೆಯಲ್ಲಿ ಜನ ಸಾಮಾನ್ಯರಿಗೆ ಕಿರುಕುಳ ನೀಡುತ್ತಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೧೫೫ (೧೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮ್ಯೂಟೇಶನ್, ಭೂ ಪರಿವರ್ತನ ಪ್ರಕ್ರಿಯೆಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಜನ ಸಾಮಾನ್ಯರಿಗೆ ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಇ) ಎಷ್ಟು ಜನ ಅಧಿಕಾರಿಗಳು ಮತ್ತು ಸಿಬ್ಬಂದಿಯವರ ಮೇಲೆ ಶಿಸ್ತು ಕ್ರಮಕೈಗೊಳ್ಳಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದ ಮೀನುಗಾರರಿಗೆ ವಸತಿ ಸೌಲಭ್ಯ ಕಲ್ಪಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೧೫೬ (೧೩೪) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮೀನುಗಾರರಿಗೆ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರ ಚಿಂತಿಸಿದೆಯೇ ; ಇದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಮತ್ಸ್ಯಾಶ್ರಯ ಯೋಜನೆಗೆ ಎಷ್ಟು ಅನುದಾನ ನಿಗಧಿ ಮಾಡಲಾಗಿದೆ, ಇದುವರೆವಿಗೂ ಈ ಯೋಜನೆಯಡಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; ಒಂದು ಮನೆಗೆ ಎಷ್ಟು ಹಣ ನಿಗದಿಪಡಿಸಲಾಗಿದೆ ? (ಫಲಾನುಭವಿಗಳ ವಿವರ ನೀಡುವುದು)

## ಜಮೀನುಗಳನ್ನು ವಾಣಿಜ್ಯ ಉದ್ದೇಶಗಳಿಗೆ ಬಳಸುತ್ತಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೧೫೭ (೧೩೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಭೂ ಪರಿವರ್ತನೆಯಾಗದೆ ವಾಣಿಜ್ಯ ಉದ್ದೇಶಗಳಿಗೆ ಜಮೀನು ಬಳಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಜಮೀನು ಬಳಕೆ ಮಾಡಲಾಗಿದೆ ; ಈ ರೀತಿಯ ಪ್ರಕರಣವನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ;

(ಇ) ಭೂ ಸುರಕ್ಷಾ ಯೋಜನೆಗೆ ಎಷ್ಟು ಅನುದಾನ ನಿಗಧಿಪಡಿಸಲಾಗಿದೆ ; ಈ ಅನುದಾನ ಯಾವುದಕ್ಕೆ ಬಳಕೆಯಾಗಿದೆ ? (ವಿವರ ನೀಡುವುದು)

## ಮುಜರಾಯಿ ಇಲಾಖೆಯಲ್ಲಿ ಬರುವ ದೇವಸ್ಥಾನಗಳ ಕುರಿತು

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೧೫೮ (೧೩೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಮುಜರಾಯಿ ದೇವಸ್ಥಾನಗಳ ಸಂಖ್ಯೆ ಎಷ್ಟು ;

(ಆ) ಮುಜರಾಯಿ ಇಲಾಖೆಯ ಎಷ್ಟು ಮುಜರಾಯಿ ಆಸ್ತಿಯನ್ನು ಬಾಡಿಗೆಗೆ ಮತ್ತು ಗುತ್ತಿಗೆಗೆ ನೀಡಲಾಗಿದೆ ; ಅವು ಯಾವುವು ; ಇದರಿಂದ ಸರ್ಕಾರಕ್ಕೆ ಎಷ್ಟು ಆದಾಯ ಬರುತ್ತಿದೆ ;

(ಇ) ಇಲಾಖೆಯ ಆಸ್ತಿಯನ್ನು ಖಾಸಗಿಯವರು ಒತ್ತುವರಿ ಮಾಡಿಕೊಂಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಇದರ ಒಟ್ಟು ಮೌಲ್ಯವೆಷ್ಟು ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

(ಈ) ಒತ್ತುವರಿಯಾಗಿರುವ ಜಮೀನುಗಳ ಪೈಕಿ ಇದುವರೆವಿಗೂ ಎಷ್ಟು ಆಸ್ತಿಯನ್ನು ಸರ್ಕಾರದ ವಶಕ್ಕೆ ಪಡೆಯಲಾಗಿದೆ ;

(ಉ) ಧಾರ್ಮಿಕ ಮತ್ತು ದತ್ತಿ ಸಂಸ್ಥೆಗಳಿಗೆ ರಾಜ ಮಹಾರಾಜರ ಕಾಲದಿಂದಲೂ ನಾನಾ ಸಂದರ್ಭಗಳಲ್ಲಿ ದಾನದ ರೂಪದಲ್ಲಿ ಹಾಗೂ ಇನಾಂ ರೂಪದಲ್ಲಿ ಬಂದಿರುವ ಆಸ್ತಿಗಳೆಷ್ಟು ; ಇವುಗಳು ಕಂದಾಯ ಇಲಾಖೆಯ ದಾಖಲೆಗಳಲ್ಲಿ ನಮೂದಾಗಿದೆಯೇ ? (ವಿವರಗಳನ್ನು ಒದಗಿಸುವುದು)

## ಗ್ರೂಪ್ 'ಡಿ' ಹುದ್ದೆಗಳ ಭರ್ತಿ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೯ (೧೬೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ ವ್ಯಾಪ್ತಿಯ ಪಶು ಸಂಗೋಪನೆ ಇಲಾಖೆಯಲ್ಲಿ ಗ್ರೂಪ್ 'ಡಿ' ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಎಷ್ಟು ಗ್ರೂಪ್ 'ಡಿ' ಹುದ್ದೆಗಳು ಖಾಲಿ ಇವೆ ; (ಮಾಹಿತಿ ನೀಡುವುದು)

(ಆ) ಸರ್ಕಾರವು ಇಲ್ಲಿಯವರೆಗೆ ಈ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮವೇನು ; ಭರ್ತಿ ಮಾಡದಿದ್ದಲ್ಲಿ, ಯಾವಾಗ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ? (ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಮನೆಗಳ ಹಂಚಿಕೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೦ (೧೬೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೦೨ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಗ್ರಾಮ ಪಂಚಾಯತ್ ಮೂಲಕ ವಿತರಣೆ ಮಾಡಲು ಉದ್ದೇಶಿಸಿರುವ ಮನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ನಿರ್ಮಾಣ ಹಂತದಲ್ಲಿರುವ ಮನೆಗಳಿಗೆ ತಾಂತ್ರಿಕ ಕಾರಣಗಳಿಂದ ಹಣ ಬಿಡುಗಡೆಯಾಗದೇ ಇರುವ ಫಲಾನುಭವಿಗಳೆಷ್ಟು ? (ಮಾಹಿತಿ ನೀಡುವುದು)

## ಬೀದರ್ ಜಿಲ್ಲೆ ಔರಾದ್ ತಾಲ್ಲೂಕಿನ ಕುಂದಗೋಳ ಗ್ರಾಮದ ಸೇತುವೆ ನಿರ್ಮಾಣ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೧ (೧೬೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ ಔರಾದ್ ತಾಲ್ಲೂಕಿನ ಕುಂದಗೋಳ ಗ್ರಾಮದ ಬಳಿ ಇರುವ ಸೇತುವೆ ಸುಮಾರು ೨೫ ವರ್ಷದ ಹಳೆಯದಾಗಿದ್ದು

ಮತ್ತು ತಡೆಗೋಡೆಯಿಲ್ಲದೆ ಯಾವ ಸಮಯದಲ್ಲಾದರೂ ಬೀಳುವ ಹಂತದಲ್ಲಿದ್ದು, ಇದರಿಂದ ಜನರು ಮತ್ತು ವಾಹನ ಸವಾರರು ಜೀವ ಭಯದಲ್ಲಿಯೇ ಓಡಾಡುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು ; ಯಾವಾಗ ಸೇತುವೆ ಕಾಮಗಾರಿ ಪ್ರಾರಂಭಮಾಡಲಾಗುವುದು ?

## ಮತ್ಸ್ಯ ಸಂಪದ ಯೋಜನೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೨ (೧೬೩) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ ವ್ಯಾಪ್ತಿಯಲ್ಲಿ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆ ಅಡಿಯಲ್ಲಿ ಕಳೆದ ೦೩ ವರ್ಷಗಳಲ್ಲಿ ಎಷ್ಟು ಫಲಾನುಭವಿಗಳು ಆಯ್ಕೆಯಾಗಿದ್ದಾರೆ ; (ಮಾಹಿತಿ ನೀಡುವುದು)

(ಆ) ಘಟಕ ಸ್ಥಾಪನೆಗೆ ಆಯ್ಕೆಯಾದ ಫಲಾನುಭವಿಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಎಷ್ಟು ಸಹಾಯಧನ ನೀಡಲಾಗಿದೆ ? (ವಿವರ ಒದಗಿಸುವುದು)

## ಕೊಪ್ಪಳ ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೩ (೧೮೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಈ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಜಿಲ್ಲೆಯಲ್ಲಿ ಇನ್ನು ಹೆಚ್ಚಿನ ಪಶು ಆಸ್ಪತ್ರೆಗಳ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದರೆ, ನೂತನವಾಗಿ ಪಶು ಆಸ್ಪತ್ರೆ ಪ್ರಾರಂಭಿಸಲು ಸರ್ಕಾರದ ಮುಂದಿರುವ ಕ್ರಮಗಳೇನು ?

## ನಿಗಮ ಮಂಡಳಿಗಳಿಂದ ಕೈಗೊಳ್ಳಲಾಗಿರುವ ಕಾಮಗಾರಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೪ (೧೮೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೨-೨೩ನೇ ಸಾಲಿನಿಂದ ೨೦೨೪-೨೫ನೇ ಸಾಲಿನವರೆಗೆ ಜನವರಿ ೧೫, ೨೦೨೫ಕ್ಕೆ ಕೊನೆಗೊಂಡಂತೆ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮ/ಮಂಡಳಿಗಳಿಂದ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು, ಮುಂದುವರೆದ ಕಾಮಗಾರಿಗಳು, ಅಪೂರ್ಣಗೊಂಡ ಕಾಮಗಾರಿಗಳ ವಿವರ ಹಾಗೂ ಕಾಮಗಾರಿಗಳ ಪೈಕಿ ಎಷ್ಟು ಬಿಲ್ಲುಗಳು ಪಾವತಿಯಾಗಿದೆ ; (ವಿವರ ನೀಡುವುದು)

(ಆ) ಎಷ್ಟು ಬಿಲ್ಲುಗಳನ್ನು ಬಾಕಿ ಇರಿಸಲಾಗಿದೆ ? (ಗುತ್ತಿಗೆದಾರ ಹೆಸರೊಂದಿಗೆ ವಿವರಗಳನ್ನು ಒದಗಿಸುವುದು)

## ಕೊಪ್ಪಳ ಜಿಲ್ಲೆಯಲ್ಲಿರುವ ಲೋಕೋಪಯೋಗಿ ಇಲಾಖೆಯಡಿಯಲ್ಲಿ ಬರುವ ರಸ್ತೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೫ (೧೯೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಲೋಕೋಪಯೋಗಿ ಇಲಾಖಾ ರಸ್ತೆಗಳಾವುವು ;

(ಆ) ೨೦೨೩-೨೪ರಲ್ಲಿ ಈ ಜಿಲ್ಲೆಗಳಿಗೆ ಒದಗಿಸಿರುವ ಅನುದಾನ ಎಷ್ಟು ; ಸದರಿ ಕಾಮಗಾರಿಗಳಿಗೆ ಖರ್ಚು ಮಾಡಿರುವ ಹಣ ಎಷ್ಟು ;

(ಇ) ಕೊಪ್ಪಳ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು ; ಇದಕ್ಕಾಗಿ ಖರ್ಚು ಮಾಡಿರುವ ಹಣವೆಷ್ಟು ? (ಕಾಮಗಾರಿವಾರು ಪ್ರಗತಿಯ ವಿವರ ನೀಡುವುದು)

## ಗ್ರಾಮ ಲೆಕ್ಕಾಧಿಕಾರಿಗಳ ಮೂಲ ಸೌಲಭ್ಯಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೬ (೧೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇ-ಪೌತಿ ಖಾತೆ/ವರಸ ಆಂದೋಲನ ಎಂದರೇನು ; ಇದರ ಮಾನದಂಡನೆಗಳು ಏನು ;

(ಆ) ಮೂಲಭೂತ ಸೌಕರ್ಯವಾದ ಮೊಬೈಲ್‌ಗಳು ಪಿಡಿಓಗಳಿಗೆ ನೀಡುತ್ತಿದ್ದು ಅದೇ ರೀತಿ ಗ್ರಾಮ ಲೆಕ್ಕಾಧಿಕಾರಿಗಳಿಗೆ ನೀಡದಿರಲು ಕಾರಣವೇನು ; ಮುಂದಿನ ದಿನಗಳಲ್ಲಿ ನೀಡುವ ಯೋಜನೆ ಇದೆಯೇ ;

(ಇ) ಇವರುಗಳಿಗೆ ಹೆಚ್ಚಿನ ಕಂಪ್ಯೂಟರ್ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಗ್ರಾಮ ಆಡಳಿತ ಕಛೇರಿಗಳಿಗೆ ಎಷ್ಟು ಕಂಪ್ಯೂಟರ್ ಅಳವಡಿಸಲಾಗಿದೆ ;

(ಈ) ಗ್ರಾಮ ಲೆಕ್ಕಾಧಿಕಾರಿಗಳ ವೃತ್ತವನ್ನು ಬಹಳ ಹಿಂದಿನ ಜನಸಂಖ್ಯೆ ಆಧಾರದ ಮೇಲೆ ಮಾಡಿದ್ದು ಸದರಿ ಜನಸಂಖ್ಯೆ ಆಧಾರದ ಮೇಲೆ ಮತ್ತೆ ವೃತ್ತವನ್ನು ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲದಿದ್ದಲ್ಲಿ, ವೃತ್ತದಲ್ಲಿ ಗ್ರಾಮ ಲೆಕ್ಕಾಧಿಕಾರಿಗಳನ್ನು ಭೇಟಿ ಮಾಡುವುದು ಹೇಗೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ವಂಶವೃಕ್ಷ, ಜಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ಒಟ್ಟು ಎಷ್ಟು ಎಫ್.ಐ.ಆರ್‌ಗಳಾಗಿವೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ವಂಶವೃಕ್ಷ ಮತ್ತು ಜಾತಿ ಪ್ರಮಾಣ ಪತ್ರ ಇತರೆ ಪ್ರಮಾಣ ಪತ್ರ ತಪ್ಪು ದಾಖಲಾತಿ ನೀಡಿ ಪಡೆದುಕೊಂಡಲ್ಲಿ ನೇರ ಹೊಣೆ ಯಾರು ; ಅಧಿಕಾರಿಗಳು ತಪ್ಪು ದಾಖಲಾತಿ ನೀಡಿದ್ದಲ್ಲಿ ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಋ) ದಫ್ತರ್ ಹಾಗೂ ಜಮಾಬಂದಿಯನ್ನು ರದ್ದುಪಡಿಸುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ?

## ಕರ್ನಾಟಕ ಭವನ ಅಭಿವೃದ್ಧಿ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೭ (೧೩೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಭವನಗಳು ಯಾವ ಯಾವ ಸ್ಥಳದಲ್ಲಿ ಇವೆ ಹಾಗೂ ನೂತನವಾಗಿ ನಿರ್ಮಿಸುವ ಚಿಂತನೆ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಯಾವ ಸ್ಥಳಗಳಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರದಿಂದ ಕಳೆದ ೫ ವರ್ಷಗಳಲ್ಲಿ ಈ ಭವನಗಳಿಗೆ ಬಿಡುಗಡೆಯಾದ ಹಣ ಎಷ್ಟು ; ಎಷ್ಟು ಸಿಬ್ಬಂದಿಗಳು ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಹಾಗೂ ಖಾಯಂ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; ಈಗಾಗಲೇ ಅಸ್ತಿತ್ವದಲ್ಲಿರುವ ಕರ್ನಾಟಕ ಭವನಗಳನ್ನು ಸುವ್ಯವಸ್ಥೆಗೊಳಿಸಿ ಅಭಿವೃದ್ಧಿ ಮಾಡಲು ತಗಲಬಹುದಾದ ಅಂದಾಜು ಮೊತ್ತ ಎಷ್ಟು ? (ಭವನವಾರು ಮಾಹಿತಿ ನೀಡುವುದು)

## ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ರೇಷ್ಮೆ ಹುಳು ಸಾಕಾಣಿಕಾ ಮನೆಗಳಿಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೮ (೧೮೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷಗಳಲ್ಲಿ ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ರೇಷ್ಮೆ ಇಲಾಖೆಯಡಿಯಲ್ಲಿ ರೇಷ್ಮೆ ಹುಳು ಸಾಕುವ ಮನೆಗಳಿಗೆ ನೀಡಿರುವ

ಸಹಾಯಧನ ಎಷ್ಟು; (ವರ್ಷವಾರು ಮತ್ತು ಫಲಾನುಭವಿವಾರು ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಫಲಾನುಭವಿಗಳಿಗೆ ರೇಷ್ಮೆ ಹುಳು ಸಾಕಾಣಿಕೆ ಮನೆಗೆ ನೀಡಿರುವ ಸಹಾಯಧನದ ಸಂಖ್ಯೆ ಎಷ್ಟು ; ಸಹಾಯಧನದ ಮೊತ್ತ ಎಷ್ಟು ; (ವರ್ಷವಾರು ವಿವರ ನೀಡುವುದು)

(ಇ) ೨೦೨೪-೨೫ನೇ ಸಾಲಿನಲ್ಲಿ ರೇಷ್ಮೆ ಹುಳು ಸಾಕಾಣಿಕೆ ಮನೆಗೆ ಸಹಾಯಧನಕ್ಕೆ ಅರ್ಜಿ ಸಲ್ಲಿಸಿರುವ ಎಲ್ಲಾ ವರ್ಗದ ಫಲಾನುಭವಿಗಳ ಸಂಖ್ಯೆ ಎಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಉಳಿದಿರುವ ಅರ್ಜಿಗಳನ್ನು ಇತ್ಯರ್ಥಪಡಿಸಲು ಅನುದಾನವನ್ನು ಬಿಡುಗಡೆಗೊಳಿಸಲು ಸರ್ಕಾರ ಕ್ರಮವಹಿಸುವುದೇ ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. O221/500 ಪ್ರತಿಗಳು/28-02-2025